Volume : 9 | Issue : 128 | August, 01 - 2026
ಸಂಪುಟ : 9 | ಸಂಚಿಕೆ : 128 | ಆಗಸ್ಟ್, 01 - 2026
RNI NO: KARKAN/2018/78481



# VIKRAMA VAHINI
# ವಿಕ್ರಮ ವಾಹಿನಿ



3 ರೂ. | ಪುಟ-8
ಕನ್ನಡ ಪಾಕ್ಷಿಕ ಪತ್ರಿಕೆ | ಸಂಪಾದಕಿ: ಬಿ.ಎನ್. ಸ್ವರ್ಣಲತ | ಆಗಸ್ಟ್ 01, 2026 |

‘ಶಿಕ್ಷಿಸುವುದಕ್ಕಿಂತ ಸರಿಯಾದ ದಾರಿಗೆ ತರೋದೇ ನಮ್ಮ ಧರ್ಮ’ | ಪುಟ 4

‘ಸಂಪುಟ ವಿಸ್ತರಣೆ ಚರ್ಚೆ ಪೂರ್ಣ, ಫಲಿತಾಂಶಕ್ಕೆ ಕಾಯುತ್ತಿದ್ದೇವೆ’ | ಪುಟ 2

ನಾಲ್ವರು ಮಹನೀಯರಿಗೆ ‘ಅಕ್ಷಯ ರತ್ನ’ ಪುರಸ್ಕಾರ | ಪುಟ 4

# ಸರ್ಕಾರಕ್ಕೆ ‘ಕಾವೇರಿ’ ಕಗ್ಗಂಟು!

## ಬೀದಿಗಿಳಿದ ಬಿಜೆಪಿ | ಜೆಡಿಎಸ್ ಆಕ್ರೋಶ | ಭಾನುವಾರ ಸರ್ವ ಪಕ್ಷ ಸಭೆ

www.vikramavahini.com | ಮಂಡ್ಯ

ರಾಜ್ಯದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ರಾಜ್ಯದ ಜನರ ಹಿತಕ್ಕಿಂತ ದೆಹಲಿಯಲ್ಲಿ ರಾಹುಲ್ ಗಾಂಧಿ ಮನೆ ಕಾದು ಸಚಿವ ಸಂಪುಟ ವಿಸ್ತರಣೆ ಮಾಡುವುದೇ ಮುಖ್ಯವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಆರೋಪಿಸಿದ್ದಾರೆ.

ಕಾವೇರಿ ನದಿ ನೀರಿನ ವಿಚಾರದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ವೈಫಲ್ಯವನ್ನು ಖಂಡಿಸಿ, ಶ್ರೀರಂಗಪಟ್ಟಣದ ಕೆ.ಆರ್.ಎಸ್ ಡ್ಯಾಂ ಬಳಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಶಿವಕುಮಾರ್ ಅವರು ಪ್ರಾಮಾಣಿಕರಾಗಿದ್ದರೆ ಹನಿ ನೀರನ್ನೂ ಕೆಆರ್‌ಎಸ್‌ನಿಂದ ಬಿಡಲ್ಲ; ಅಗತ್ಯ ಬಿದ್ದರೆ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ ಎನ್ನುತ್ತಿದ್ದರು. ಆದರೆ ಅವರು ಅದನ್ನು ಹೇಳದೆ ರಾಜಕೀಯ ದೊಂಬರಾಟ ಮಾಡುತ್ತಿದ್ದಾರೆ. ಲಜ್ಜೆಗೆಟ್ಟ ಕಾಂಗ್ರೆಸ್ ಮುಖಂಡರಿಗೆ ಎಷ್ಟು ಬಾರಿ ಧಿಕ್ಕಾರ ಹೇಳಿದರೂ ಕಡಿಮೆ ಎಂದರು.

ಶಿವಕುಮಾರ್ ಅವರು ಈಗಲಾದರೂ ತಮಿಳುನಾಡಿನ ಮುಖ್ಯಮಂತ್ರಿ ವಿಜಯ್ ಅವರನ್ನು ಕರೆದುಕೊಂಡು ಬಂದು ಕೆಆರ್‌ಎಸ್ ಅನ್ನು ತೋರಿಸಲಿ. ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೂ ತೊಂದರೆಯಾಗಲಿ ಎಂದು ಮನವರಿಕೆ ಮಾಡಿಕೊಡಲಿ ಎಂದು ಆಗ್ರಹಿಸಿದರು. ರಾಜ್ಯ ಸರ್ಕಾರ ಸರಿಯಾದ ಸಮಯದಲ್ಲಿ ಸುಪ್ರೀಂ ಕೋರ್ಟ್‌ಗೆ ನೀರಿನ ಕೊರತೆ ಬಗ್ಗೆ ಸೂಕ್ತವಾಗಿ ಮನವರಿಕೆ ಮಾಡಿಕೊಡಬೇಕಿತ್ತು. ಆಗ ಇಂದಿನ ಗಂಡಾಂತರದಿಂದ ತಪ್ಪಿಸಿಕೊಳ್ಳಬಹುದಿತ್ತು. ಆದರೆ ಈಗ ನೀರಿಗೆ ಹಾಹಾಕಾರ ಇದೆ ಎಂದರು.

ರಾಜ್ಯದ ಜನರು ಸಂಕಷ್ಟದಲ್ಲಿ ಇದ್ದಾಗ ಅವರ ಪರ ನಿಲ್ಲಬೇಕಾಗಿದ್ದು ಮುಖ್ಯಮಂತ್ರಿಗಳ ಜವಾಬ್ದಾರಿ. ಆದರೆ ಅವರು ಹಾಗೆ ಮಾಡಲಿಲ್ಲ. ಯಾವುದೇ ಕಾರಣಕ್ಕೂ ಹನಿ ನೀರನ್ನೂ ತಮಿಳುನಾಡಿಗೆ ಬಿಡಕೂಡದು ಎಂದು ಹೇಳಿದರು. ಕಾವೇರಿ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರವನ್ನು ರಾಜ್ಯ ಸರ್ಕಾರ ಕಂಡುಕೊಳ್ಳಬೇಕಿದೆ. ಈ ನಿಟ್ಟಿನಲ್ಲಿ ಮೇಕೆದಾಟು ಯೋಜನೆ ಆರಂಭಿಸಲಿ. ಭಾರತೀಯ ಜನತಾ ಪಕ್ಷ ಸದಾ ರೈತರ ಪರವಾಗಿ ನಿಲ್ಲಲಿದೆ ಎಂದು ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ಕಾವೇರಿ ನೀರು ಬಿಡುಗಡೆ ಆದೇಶದ ವಿರುದ್ಧ ಘೋಷಣೆಗಳನ್ನು ಕೂಗಿ ರಾಜ್ಯ ಸರ್ಕಾರದ ಧೋರಣೆಯನ್ನು ತೀವ್ರವಾಗಿ ಟೀಕಿಸಿದರು. ರಾಜ್ಯದ ರೈತರ ಹಿತವನ್ನು ಯಾವುದೇ ಕಾರಣಕ್ಕೂ ಕಡೆಗಣಿಸಬಾರದು ಎಂದು ಒತ್ತಾಯಿಸಿದರು.

ಬಿಜೆಪಿ ಮುಖಂಡರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಾನೂನು ಹೋರಾಟವನ್ನು ಮತ್ತಷ್ಟು ಬಲಪಡಿಸಿ, ಕಾವೇರಿ ವಿವಾದಕ್ಕೆ ರಾಜ್ಯದ ಪರವಾಗಿ ಶಾಶ್ವತ ಪರಿಹಾರ ಕಂಡುಕೊಳ್ಳುವಂತೆ ಆಗ್ರಹಿಸಿದರು.



## ಬರ ನಿರ್ವಹಣೆಯಲ್ಲಿ ಸರ್ಕಾರ ವಿಫಲ: ಕುಮಾರಸ್ವಾಮಿ

www.vikramavahini.com | ಮಂಡ್ಯ


ಬರ ಪರಿಸ್ಥಿತಿ ನಿರ್ವಹಣೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಎಂದು ದೂರಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಈಗಾಗಲೇ ರಾಜ್ಯದಲ್ಲಿ ರೈತರ ಆತ್ಮಹತ್ಯೆಗಳು ಆರಂಭವಾಗಿವೆ. ಕೂಡಲೇ ಸರ್ಕಾರ ಅಮೂಲ್ಯ ಜೀವಗಳ ಸಾವನ್ನು ತಡೆಯುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಮಂಡ್ಯ ತಾಲೂಕಿನ ಹಟ್ನ ಬೇವುಕಲ್ಲು ಗ್ರಾಮದಲ್ಲಿ ಸಾಲ ಬಾಧೆಗೆ ಹೆದರಿ ರೈತ ದಂಪತಿ ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ ತೀವ್ರ ಕಳವಳ ಹಾಗೂ ಆತಂಕ ವ್ಯಕ್ತಪಡಿಸಿದ ಸಚಿವರು, ಇಂದು ಗ್ರಾಮಕ್ಕೆ ಬಂದು ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

ಬಳಿಕ ಮಾಧ್ಯಮಗಳ ಜತೆ ಮಾತನಾಡಿದ ಕೇಂದ್ರ ಸಚಿವರು; ರಾಜ್ಯದಲ್ಲಿ ಮತ್ತೆ ರೈತರ ಆತ್ಮಹತ್ಯೆ ಸರಣಿ ಆರಂಭವಾಗಿದೆ. ನೂರಾರು ರೈತರು ಆತ್ಮಹತ್ಯೆ ಹಾದಿ ಹಿಡಿದಿದ್ದಾರೆ. ಸಾಕಷ್ಟು ಕಡೆ ಸಂಪೂರ್ಣ ಬೆಳೆ ಹಾನಿಯಾಗಿದೆ. ಈ ಸರ್ಕಾರದವರು ನೋಡಿದರೆ ರೈತರ ನೆರವಿಗೆ ಹೋಗುವುದನ್ನು ಬಿಟ್ಟು ಹೊಲದಲ್ಲಿ ನಿಂತು ಫೋಟೋಗೆ ಪೋಸ್ ಕೊಟ್ಟು ಬರುತ್ತಿದ್ದಾರೆ. ಅದರ ಬದಲಿಗೆ ಇವರು ರೈತರಿಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು.

ಸಾಲ ಪಡೆದಿರುವ ರೈತರಿಗೆ ಬ್ಯಾಂಕುಗಳು ನೋಟಿಸ್ ಕೊಡಲು ಶುರು ಮಾಡಿವೆ. ರಾಜ್ಯ ಸರ್ಕಾರ ಏನು ಮಾಡುತ್ತಿದೆ ಎಂಬುದೇ ಅರ್ಥವಾಗುತ್ತಿಲ್ಲ. ದುರಂತವೆಂದರೆ ಈ ರಾಜ್ಯದಲ್ಲಿ ಈಗ ಕೃಷಿ ಸಚಿವರೇ ಇಲ್ಲ ಎಂದು ಕಿಡಿಕಾರಿದರು.

ಗ್ಯಾರಂಟಿ ಯೋಜನೆಗಳಿಗೆ ಕೊಡಲು ಸರ್ಕಾರದ ಬಳಿ ಹಣ ಇಲ್ಲ. ಗ್ಯಾರಂಟಿಗಳು ಜನರ ಜೀವನ ಉತ್ತಮಗೊಳಿಸಿದ್ದರೆ ರೈತರು ಜೀವ ಏಕೆ ತೆಗೆದುಕೊಳ್ಳುತ್ತಿದ್ದರು? ಈಗ ಬೇರೆ ಗ್ಯಾರೆಂಟಿ ಪರಿಷ್ಕರಣೆ ಅಂತ ಹೊರಟಿದ್ದಾರೆ. ಗ್ಯಾರಂಟಿ ಪಕ್ಕಕ್ಕೆ ಇಟ್ಟು ಸರ್ಕಾರ ರೈತರ ಕಡೆಗೆ ಗಮನ ಹರಿಸಲಿ. ಸಂಪುಟ ವಿಸ್ತರಣೆ ಎಂದು ಕಳೆದ ಮೂರು ನಾಲ್ಕು ದಿನಗಳಿಂದ ಮುಖ್ಯಮಂತ್ರಿ ಸೇರಿದಂತೆ ಎಲ್ಲಾ ಸಚಿವರು ಶಾಸಕರು ಹೋಗಿ ದೆಹಲಿಯಲ್ಲಿ ಬಿಡು ಬಿಟ್ಟಿದ್ದಾರೆ. 2ನೇ ಪುಟಕ್ಕೆ



## ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ತೀರ್ಮಾನ: ಡಿ.ಕೆ.ಶಿ

www.vikramavahini.com | ಬೆಂಗಳೂರು

“ಕಾವೇರಿ ನೀರಿನ ವಿಚಾರವಾಗಿ ಕಾನೂನು ತಜ್ಞರ ಸಲಹೆ ಹಾಗೂ ವಿರೋಧ ಪಕ್ಷಗಳ ನಾಯಕರನ್ನು ವಿಶ್ವಾಸಕ್ಕೆ ಪಡೆದ ಬಳಿಕ ಮುಂದಿನ ತೀರ್ಮಾನ ಮಾಡಲಾಗುವುದು” ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

“ಕಾವೇರಿ ನೀರಿನ ವಿಚಾರದಲ್ಲಿ ನಿತ್ಯ 3500 ಕ್ಯೂಸೆಕ್ ನೀರುನ್ನು ತಮಿಳುನಾಡಿಗೆ ಹರಿಸಬೇಕು ಎಂಬ ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶ ನೀಡಿದೆ. ಈ ಹಿಂದೆ ಇಂತಹ ಸಂಕಷ್ಟ ಕಾಲದಲ್ಲಿ ಅನೇಕ ತೀರ್ಮಾನ ಬಂದಿವೆ. 2016, 2017, 2018, 2023ರಲ್ಲಿ ಇಂತಹ ಆದೇಶ ಬಂದಿವೆ.

ಕಳೆದ 3 ವರ್ಷಗಳಲ್ಲಿ ಮಳೆ ಬಹಳ ಸಂತುಷ್ಟಿಯಾಗಿ ಬಂದಿದೆ. ಕಳೆದ ವರ್ಷ ಜೂನ್ ತಿಂಗಳಲ್ಲೇ ಕೆಆರ್ ಎಸ್ ಜಲಾಶಯಕ್ಕೆ ಬಾಗಿನ ಅರ್ಪಿಸಿದ್ದೆವು. ಕಳೆದ ವರ್ಷ ಉತ್ತಮ ಮಳೆ ಬೆಳೆ ಆಗಿತ್ತು. ಕಳೆದ ವರ್ಷ 177 ಟಿಎಂಸಿ ಬದಲಾಗಿ 400ಕ್ಕೂ ಹೆಚ್ಚು ಟಿಎಂಸಿ ನೀರು ಹರಿಸಲಾಗಿತ್ತು. ಅನೇಕ ಪ್ರಮಾಣದ ನೀರು ಸಮುದ್ರವನ್ನು ಸೇರಿದೆ” ಎಂದು ತಿಳಿಸಿದರು.

“ಬಿಳಿಗುಂಡ್ಲುವಿಗೆ 3,500 ಕ್ಯೂಸೆಕ್ ನೀರನ್ನು ಹರಿಸಲು ನೀಡಿರುವ ಆದೇಶದ ವಿರುದ್ಧ ನಾವು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮುಂದೆ ಮೇಲ್ಮನವಿ ಸಲ್ಲಿಸಿದ್ದೆವು. ನಮ್ಮ ವಿರೋಧ ಪಕ್ಷಗಳ ಸ್ನೇಹಿತರು, ಅಧಿಕಾರಿಗಳು ಹೋಗಿಲ್ಲ ಎಂದು ಆರೋಪ ಮಾಡಿದರು. ನಾನು ಅವರಿಗೆ ಉತ್ತರ ಕೊಡುವ ಅಗತ್ಯವಿಲ್ಲ.

ಆದರೆ ರಾಜ್ಯದ ಜನರಿಗೆ ಮಾಹಿತಿ ನೀಡುವುದು ನನ್ನ ಜವಾಬ್ದಾರಿಯಾಗಿದೆ. ನಿನ್ನೆ ಸಿಡಬ್ಲ್ಯೂಎಂಎ ಮುಂದೆ ಮೇಲ್ಮನವಿ ಸಲ್ಲಿಸಿದ್ದೆವು. ಬಸವರಾಜ ಬೊಮ್ಮಾಯಿ ಅವರ ಬಳಿ ಇದ್ದ ಸಲಹೆಗಾರರನ್ನೇ ನಾವು ಮುಂದುವರಿಸಿದ್ದೇವೆ. ಅವರು ಸಭೆಯಲ್ಲಿ ಭಾಗವಹಿಸಿದ್ದರು” ಎಂದರು.

“ನೀರು ಹರಿಸುವ ನೀರಿನ ಪ್ರಮಾಣ ಕಡಿಮೆ ಮಾಡಿ, ನೀರು ಬಿಡುವ ತೀರ್ಮಾನವನ್ನು ಮುಂದಕ್ಕೆ ಹಾಕಿ, ನಮಗೆ ಕಾಲಾವಕಾಶ ನೀಡಿ ಎಂದು ನಾವು ಮನವಿ ಮಾಡಿದ್ದೆವು. ಆದರೆ ತಮಿಳುನಾಡಿನವರು ನಿಮಗೆ ಹೆಚ್ಚಿನ ನೀರು ಬರುತ್ತಿದೆ. ನೀವು ಹೆಚ್ಚಿನ ನೀರು ಬಿಡಬೇಕು ಎಂದು ವಾದ ಮಂಡಿಸಿದರು. ನಮ್ಮ ಅಧಿಕಾರಿಗಳು ನಮಗೆ ಸಮಾಧಾನ ತರುವಂತೆ ಸಿಡಬ್ಲ್ಯೂಎಂಎ ಮುಂದೆ ವಾದ ಮಂಡಿಸಿದರು.

ನಮ್ಮ ಅಡ್ವೋಕೇಟ್ ಜನರಲ್, ಎಸಿಎಸ್ ಅವರು ವಾದ ಮಂಡಿಸಿದ್ದಾರೆ. ಆದರೆ ಪ್ರಾಧಿಕಾರ, ನಿಮಗೆ ಒಳಹರಿವು ಇದ್ದು, ನಿಮಗೆ ಬಿಡಲು ಹೇಳಿರುವ ನೀರು ಕಡಿಮೆ ಪ್ರಮಾಣದ್ದಾಗಿದೆ ಎಂದು ಹೇಳಿದ್ದಾರೆ” ಎಂದರು.

ರಾಜ್ಯದಲ್ಲಿ ಒಳಹರಿವು ಚೇತರಿಕೆ, ಸಮಾಧಾನಕರ ವಿಚಾರ: “ಕಾವೇರಿ ಪ್ರಾಧಿಕಾರದವರಿಗೆ, ತಮಿಳುನಾಡಿನವರಿಗೆ, ಮಾಧ್ಯಮವರರು ಸೇರಿದಂತೆ ಎಲ್ಲರಿಗೂ ಪ್ರತಿ ಅಣೆಕಟ್ಟಿನ ಒಳಹರಿವಿನ ಮಾಹಿತಿ ಇದ್ದು, ಹಾರಂಗಿ ಜಲಾಶಯ 95%, ಕಬಿನಿ 83%, ಹೇಮಾವತಿಯಲ್ಲಿ 67% ನೀರು ಶೇಖರಣೆಯಾಗಿದೆ. ಈ ಮಾಹಿತಿಯನ್ನು ಯಾರಿಂದಲೂ ಮುಚ್ಚಿಡಲು ಸಾಧ್ಯವಿಲ್ಲ. ಪ್ರತಿನಿತ್ಯ 3,500 ಕ್ಯೂಸೆಕ್ ನಂತೆ 15 ದಿನಕ್ಕೆ 4.5 ಟಿಎಂಸಿ ನೀರು ಹರಿಸಲು ಆದೇಶ ನೀಡಲಾಗಿದೆ. ರಾಜ್ಯದಲ್ಲಿ ಒಳಹರಿವು ಚೇತರಿಕೆ ಕಂಡಿರುವುದು ಸಮಾಧಾನಕರ ವಿಚಾರ. ನಮ್ಮ ಅಣೆಕಟ್ಟುಗಳ ಒಳಹರಿವು 25 ಸಾವಿರ ಕ್ಯೂಸೆಕ್ ನಷ್ಟಿದ್ದು, ಅದರಲ್ಲಿ 3,500 ಕ್ಯೂಸೆಕ್ ನೀರು ಬಿಡಲು ಸೂಚಿಸಿದ್ದಾರೆ.

ಈ ಮಾಹಿತಿಗಳನ್ನು ಸಮಿತಿ ಹಾಗೂ ಪ್ರಾಧಿಕಾರ ಎರಡೂ ತನ್ನ ಆದೇಶದಲ್ಲಿ ಸೂಚಿಸಿವೆ. ಆದರೂ ನಮ್ಮ ರಾಜ್ಯದ ರೈತರ ಹಿತ ಕಾಪಾಡುವುದು ಸರ್ಕಾರದ ಕರ್ತವ್ಯ. ನಾವು ನಮ್ಮ ರಾಜ್ಯದ ರೈತರ ರಕ್ಷಣೆ ಮಾಡುತ್ತೇವೆ. ನಾವು ಶಾಸಕರನ್ನು ಕರೆದು ಕುಡಿಯುವ ನೀರು ಹಾಗೂ ಕೆರೆಗಳನ್ನು ತುಂಬಿಸುವ ರಕ್ಷಣೆ ನೀಡಿದ್ದೇವೆ. 2ನೇ ಪುಟಕ್ಕೆ

## ದಕ್ಷಿಣ ಭಾರತದಲ್ಲಿ ಭಾರೀ ಮಳೆ ಎಚ್ಚರಿಕೆ

www.vikramavahini.com | ನವದೆಹಲಿ

ದೇಶದ ಹಲವು ರಾಜ್ಯಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಎಚ್ಚರಿಕೆ ನೀಡಿದೆ. ಕೊಂಕಣ–ಗೋವಾ, ಮಧ್ಯ ಮಹಾರಾಷ್ಟ್ರ, ಗುಜರಾತ್, ಮಧ್ಯಪ್ರದೇಶ, ಛತ್ತೀಸ್‌ಗಢ, ಒಡಿಶಾ, ಜಾರ್ಖಂಡ್, ಪಶ್ಚಿಮ ಬಂಗಾಳ, ಬಿಹಾರ ಹಾಗೂ ಈಶಾನ್ಯ ರಾಜ್ಯಗಳಲ್ಲಿ ವ್ಯಾಪಕ ಮಳೆಯಾಗುವ ನಿರೀಕ್ಷೆಯಿದೆ.

ಉತ್ತರಾಖಂಡ, ಹಿಮಾಚಲ ಪ್ರದೇಶ, ಪೂರ್ವ ರಾಜಸ್ಥಾನ ಹಾಗೂ ಉತ್ತರ ಪ್ರದೇಶದ ಕೆಲ ಭಾಗಗಳಲ್ಲಿ ಭಾರೀ ಮಳೆಯಿಂದ ಸ್ಥಳೀಯ ಪ್ರವಾಹ, ಜಲಾವೃತ ಹಾಗೂ ಗುಡ್ಡ ಕುಸಿತ ಸಂಭವಿಸುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ.

ದಕ್ಷಿಣ ಭಾರತದಲ್ಲಿಯೂ ಕೇರಳ, ಕರಾವಳಿ ಕರ್ನಾಟಕ, ಒಳನಾಡು ಕರ್ನಾಟಕ, ತಮಿಳುನಾಡು ಹಾಗೂ ತೆಲಂಗಾಣದಲ್ಲಿ ಉತ್ತಮ ಮಳೆಯಾಗಲಿದ್ದು, ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಗುಡುಗು–ಮಿಂಚು ಮತ್ತು ಬಲವಾದ ಗಾಳಿಯೂ ಬೀಸುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಐಎಂಡಿ ಮನವಿ ಮಾಡಿದೆ.

ಭಾರೀ ಮಳೆಯ ಪ್ರದೇಶಗಳಲ್ಲಿ ನೀರು ನಿಂತಿರುವ ಸ್ಥಳಗಳಿಗೆ ತೆರಳದಂತೆ, ಸ್ಥಳೀಯ ಆಡಳಿತದ ಸೂಚನೆಗಳನ್ನು ಪಾಲಿಸುವಂತೆ ಸಲಹೆ ನೀಡಲಾಗಿದೆ. ಸಮುದ್ರದಲ್ಲಿ ಅಲೆಗಳ ಅಬ್ಬರ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ.

ಐಎಂಡಿ ಪ್ರಕಾರ, ನೈಋತ್ಯ ಮುಂಗಾರು ಸಾಮಾನ್ಯವಾಗಿ ಮುಂದುವರಿದಿದ್ದು, ಕೃಷಿಗೆ ಅನುಕೂಲಕರ ಮಳೆಯ ನಿರೀಕ್ಷೆಯಿದೆ. ಆದರೆ ಅತಿವೃಷ್ಟಿಯಿಂದ ಹಠಾತ್ ಪ್ರವಾಹ, ನಗರ ಪ್ರದೇಶಗಳಲ್ಲಿ ಜಲಾವೃತ ಹಾಗೂ ಸಂಚಾರ ವ್ಯತ್ಯಯ ಉಂಟಾಗುವ ಸಾಧ್ಯತೆ ಇರುವುದರಿಂದ ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ.

## ರೇಷನ್ ಅಂಗಡಿಯಲ್ಲಿ ಸಿನಿಮಾ ಟಿಕೆಟ್ ಮಾರಾಟಕ್ಕೆ ಬ್ರೇಕ್

www.vikramavahini.com | ಹಾವೇರಿ

ಚಿತ್ರಮಂದಿರಗಳ ಬಳಿ ಮತ್ತು ಚಿತ್ರಮಂದಿರದ ಕೌಂಟರ್ ನಲ್ಲಿ ನೀಡುವ ಟಿಕೆಟ್‌ಗಳನ್ನು ಹಾವೇರಿಯ ಪಡಿತರ ಅಂಗಡಿಯಲ್ಲಿ ”ಸರ್ಕಾರಿ ನ್ಯಾಯ ಬೆಲೆ ಅಂಗಡಿ”ಯ ಸಿನಿಮಾ ಟಿಕೆಟ್ ಮಾರಾಟ ಮಾಡಲಾಗಿದ್ದು, ಇದಕ್ಕೆ ಭಾರೀ ಆಕ್ಷೇಪಗಳು ವ್ಯಕ್ತವಾಗಿವೆ. ಹೌದು ಹಾವೇರಿಯ ಪಡಿತರ ಅಂಗಡಿಯಲ್ಲಿ ‘ಸರ್ಕಾರಿ ನ್ಯಾಯಬೆಲೆ ಅಂಗಡಿ’ ಸಿನಿಮಾದ ಪ್ರೀಮಿಯರ್ ಶೋ ಟಿಕೆಟ್ ಮಾರಾಟ ಮಾಡಿಲಾಗಿದ್ದು, ಇದಕ್ಕೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ್ದರು. ಮಾಧ್ಯಮಗಳ ವರದಿ ಬೆನ್ನಲ್ಲೇ ಇದೀಗ ಎಚ್ಚೆತ್ತ ಆಹಾರ ಇಲಾಖೆ ನ್ಯಾಯಬೆಲೆ ಅಂಗಡಿಯಲ್ಲಿ ಸಿನಿಮಾ ಟಿಕೆಟ್ ಮಾರಾಟಕ್ಕೆ ಬ್ರೇಕ್ ಹಾಕಿದೆ. ಈ ಬಗ್ಗೆ ಹಾವೇರಿ ಜಿಲ್ಲೆಯ ಆಹಾರ ಇಲಾಖೆಯ ಉಪನಿರ್ದೇಶಕ ಮಂಜುನಾಥ್ ಡಿ.ಜೆ ಮಾಹಿತಿ ನೀಡಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಹಾವೇರಿ ಜಿಲ್ಲೆಯ ಆಹಾರ ಇಲಾಖೆಯ ಉಪನಿರ್ದೇಶಕ ಮಂಜುನಾಥ್ ಡಿ.ಜೆ, ಸರ್ಕಾರಿ ನ್ಯಾಯ ಬೆಲೆ ಅಂಗಡಿ ಸಿನಿಮಾ ಟಿಕೆಟ್ ಮಾರಾಟ ಮಾಡಲು ಆದೇಶ ನೀಡಲಾಗಿತ್ತು. ಅಂಗಡಿ ಮಾಲೀಕರಿಗೆ ಮೊದಲೇ ಹೇಳಿದ್ವಿ ಬಲವಂತವಾಗಿ ನೀಡಬಾರದು ಅಂತ. ಬಲವಂತವಾಗಿ ನೀಡಿದ ಅಂಗಡಿಯ ಮಾಲೀಕರಿಗೆ ನೋಟೀಸ್ ನೀಡಲಾಗಿದೆ.

ಅಲ್ಲದೇ ಟಿಕೆಟ್ ವಾಪಸು ಪಡೆದು ಗ್ರಾಹಕರಿಗೆ ಹಣ ನೀಡಲು ಸೂಚನೆ ನೀಡಿದೆ. ಈ ಕುರಿತು ಆಯುಕ್ತರಿಗೆ ವರದಿ ನೀಡಲಾಗಿದೆ ಎಂದು ಹೇಳಿದರು. 3ನೇ ಪುಟಕ್ಕೆ

## ವಿನಯ್ ಕುಲಕರ್ಣಿ ಸೇರಿ ಹತ್ತು ಮಂದಿಯ ಶಿಕ್ಷೆ ಅಮಾನತು

www.vikramavahini.com | ಬೆಂಗಳೂರು

ಧಾರವಾಡದ ಬಿಜೆಪಿ ಮುಖಂಡ ಯೋಗೀಶ್ ಗೌಡರ್ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಶಾಸಕ ವಿನಯ ಕುಲಕರ್ಣಿ ಸೇರಿ 10 ಮಂದಿಗೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ಜೀವಾವಧಿ ಶಿಕ್ಷೆ ವಿಧಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಹೊರಡಿಸಿರುವ ಆದೇಶ ಅಮಾನತ್ತಿನಲ್ಲಿಟ್ಟು, ಜಾಮೀನು ನೀಡುವಂತೆ ಕಾಂಗ್ರೆಸ್ ಮುಖಂಡ ವಿನಯ ಕುಲಕರ್ಣಿ, ಚಂದ್ರಶೇಖರ ಇಂಡಿ ಮತ್ತಿತರರು ಸಲ್ಲಿಸಿದ್ದ ಮಧ್ಯಂತರ ಅರ್ಜಿಗಳ ಕುರಿತ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿಗಳಾದ ಮೊಹಮ್ಮದ್ ನವಾಜ್ ಮತ್ತು ಜಿ ಬಸವರಾಜ ಅವರ ವಿಭಾಗೀಯ ಪೀಠ ಶುಕ್ರವಾರ ಪ್ರಕಟಿಸಿತು.

ಮಧ್ಯಂತರ ಅರ್ಜಿಗಳನ್ನು ಮಾನ್ಯ ಮಾಡಿರುವ ಪೀಠವು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಿಧಿಸಿರುವ ಶಿಕ್ಷೆ ರದ್ದುಕೋರಿ ಸಲ್ಲಿಸಲಾಗಿರುವ ಮೇಲ್ಮನವಿಗಳು ಇತ್ಯರ್ಥವಾಗುವವರೆಗೆ ವಿಚಾರಣಾ ನ್ಯಾಯಾಲಯದ ಆದೇಶವನ್ನು ಅಮಾನತಿನಲ್ಲಿರಿಸಲಾಗಿದ್ದು, ಮೇಲ್ಮನವಿದಾರರನ್ನು ಷರತ್ತುಗಳಿಗೆ ಒಳಪಟ್ಟಂತೆ ಜಾಮೀನಿನ ಮೇಲೆ ಬಿಡುಗಡೆ ಮಾಡಬೇಕು ಎಂದು ಆದೇಶಿಸಿದೆ.

## ಇಂಟೆಲ್ ಅಧಿಕಾರಿ ಹತ್ಯೆ: ತಾಹಿರ್‌ಗೆ ಜೀವಾವಧಿ



www.vikramavahini.com | ನವದೆಹಲಿ

2020ರ ಫೆಬ್ರವರಿಯಲ್ಲಿ ನಡೆದ ದೆಹಲಿ ಗಲಭೆಯ ಸಂದರ್ಭದಲ್ಲಿ ಗುಪ್ತಚರ ಬ್ಯೂರೋ (ಐಬಿ) ಅಧಿಕಾರಿ ಅಂಕಿತ್ ಶರ್ಮಾ ಅವರ ಹತ್ಯೆಗೆ ಸಂಬಂಧಿಸಿದಂತೆ ಆಮ್ ಆದ್ಮಿ ಪಕ್ಷದ ಮಾಜಿ ಕೌನ್ಸಿಲರ್ ತಾಹಿರ್ ಹುಸೇನ್ ಅವರಿಗೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ.

ಶಿಕ್ಷೆಯನ್ನು ಪ್ರಕಟಿಸಿದ ದೆಹಲಿಯ ಕರ್ಕಾರ್ಡೂಮಾ ನ್ಯಾಯಾಲಯವು, ಅಪರಾಧದ ರೀತಿ ಅತ್ಯಂತ ಕ್ರೂರವಾಗಿತ್ತು ಎಂದು ಹೇಳಿದೆ. ಕೊಲೆಯೊಂದಿಗೆ ಕ್ರೌರ್ಯ ಕೊನೆಗೊಂಡಿಲ್ಲ. ದ್ವೇಷ ಇನ್ನೂ ತಣಿದಿಲ್ಲ ಎಂಬಂತೆ ಮೃತನ ದೇಹವನ್ನು ಹತ್ತಿರದ ಚರಂಡಿಗೆ ಎಳೆದುಕೊಂಡು ಹೋಗಿ ಎಸೆಯಲಾಗಿದೆ ಎಂದು ನ್ಯಾಯಾಲಯ ಹೇಳಿದೆ. ‘ಅಪರಾಧವು ಅಪರೂಪದಲ್ಲೇ ಅಪರೂಪವಾಗಿದೆ’ ಎಂದಿದೆ.

## 70 ಸಾವಿರ ಸಕ್ರಮ ನೇಮಕಾತಿಗೆ ತಜ್ಞರ ಸಮಿತಿ



ರಾಜ್ಯದಲ್ಲಿನ ಖಾಲಿ ಹುದ್ದೆಗಳ ನೇಮಕಾತಿ ಪರೀಕ್ಷೆಗಳ ಸನ್ನದ್ಧತೆ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹಿರಿಯ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಗೃಹ ಹಾಗೂ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ನೇಮಕಾತಿ ಪ್ರಕ್ರಿಯೆ ಕುರಿತು ಕೆಪಿಎಸ್‌ಸಿ ಮತ್ತು ಕೆಇಎ ಕೈಗೊಂಡಿರುವ ಕ್ರಮಗಳನ್ನು ಪರಿಶೀಲಿಸಲು ಹಿರಿಯ ಅಧಿಕಾರಿಗಳನ್ನೊಳಗೊಂಡ ತಜ್ಞರ ಸಮಿತಿ ರಚಿಸುವಂತೆ ಮುಖ್ಯಮಂತ್ರಿ ಸೂಚನೆ ನೀಡಿದರು.

www.vikramavahini.com | ಬೆಂಗಳೂರು

ಕರ್ನಾಟಕದಲ್ಲಿ ಇದೇ ಮೊದಲ ಬಾರಿಗೆ 70 ಸಾವಿರಕ್ಕೂ ಅಧಿಕ ಹುದ್ದೆಗಳ ನೇಮಕಾತಿಗೆ ಸಿದ್ಧತೆಗಳು ನಡೆದಿವೆ. ಈ ಸಂಬಂಧ ಡಿಕೆ ಶಿವಕುಮಾರ್ ಅವರು ರಾಜ್ಯದಲ್ಲಿ ಖಾಲಿ ಹುದ್ದೆಗಳಿಗೆ ನೇಮಕಾತಿಗಾಗಿ ಕೈಗೊಳ್ಳಲಾಗುವ ಪರೀಕ್ಷೆಗಳ ಸನ್ನದ್ಧತೆಯ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದು, ಸಂಪೂರ್ಣ ನೇಮಕಾತಿ ಪ್ರಕ್ರಿಯೆಯನ್ನು ಅತ್ಯಂತ ಪಾರದರ್ಶಕವಾಗಿ, ಕಟ್ಟುನಿಟ್ಟಿನಿಂದ ನಡೆಸಲು ಕ್ರಮ ಕೈಗೊಳ್ಳಬೇಕೆಂದು ಖಡಕ್ ಸೂಚನೆ ನೀಡಿದ್ದಾರೆ. ಇನ್ನು ಸ್ಪರ್ಧಾತ್ಮಕ ಪರೀಕ್ಷೆಗಳು ಹಾಗೂ ನೇಮಕಾತಿ ವ್ಯವಸ್ಥೆಯ ಸುಧಾರಣೆಗೆ ಸಮಿತಿ ರಚನೆ ಮಾಡಲಾಗಿದೆ.

**ಸುಧಾರಣೆಗೆ ಸಮಿತಿ ರಚನೆ**

ಸ್ಪರ್ಧಾತ್ಮಕ ಪರೀಕ್ಷೆಗಳು ಹಾಗೂ ನೇಮಕಾತಿ ವ್ಯವಸ್ಥೆಯ ಸುಧಾರಣೆಗೆ ಸಮಿತಿ ರಚನೆ ಮಾಡಲಾಗಿದೆ. ಎಸ್.ವಿ ರಂಗನಾಥ್ ಅಧ್ಯಕ್ಷರಾಗಿದ್ದು, ಟಿ.ಎಂ ವಿಜಯಭಾಸ್ಕರ್, ವಂದಿತಾ ಶರ್ಮಾ ಹಾಗೂ ಎಲ್.ಕೆ. ಅಥೀಕ್ ಸಮಿತಿಯ ಸದಸ್ಯರಾಗಿದ್ದಾರೆ.

ಈ ಸಮಿತಿಗೆ ನೇಮಕಾತಿ ಹಾಗೂ ಪರೀಕ್ಷಾ ಪ್ರಕ್ರಿಯೆಯನ್ನು ಹೆಚ್ಚು ಪರಿಣಾಮಕಾರಿ ಪಾರದರ್ಶಕ ಮತ್ತು ವಿಶ್ವಾಸಾರ್ಹವಾಗಿಸಲು ಅಗತ್ಯ ಸುಧಾರಣೆಗಳನ್ನು ಅಧ್ಯಯನ ಮಾಡಿ ಶಿಫಾರಸುಗಳನ್ನು ಸಲ್ಲಿಸುವ ಜವಾಬ್ದಾರಿ ನೀಡಲಾಗಿದೆ.

**ಅಧಿಕಾರಿಗಗಳಿಗೆ ಡಿಕೆಶಿ ಪಾಠ**

ನೇಮಕಾತಿಯಲ್ಲಿ ದೇಶಕ್ಕೆ ನಾವು ಮಾದರಿಯಾಗಬೇಕು.70 ಸಾವಿರಕ್ಕೂ ಅಧಿಕ ಹುದ್ದೆಗಳಿಗೆ ನೇಮಕಾತಿ ಮಾಡುವ ದೊಡ್ಡ ಕಾರ್ಯವನ್ನು ನಾವು ಕೈಗೆತ್ತಿಕೊಂಡಿದ್ದೇವೆ. ಹೀಗಾಗಿ ಪಾರದರ್ಶಕವಾಗಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಿ ದೇಶಕ್ಕೆ ಮಾದರಿಯಾಗಿ ತೋರಿಸಬೇಕಾಗಿದೆ.

ಪುಟ ಸಂಖ್ಯೆ–03

# ಡಿಕೆಶಿ ತಮಿಳುನಾಡಿನ ನೀರುಗಂಟಿ: ಆರ್ ಅಶೋಕ್



ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಮಾತನಾಡಿ, ಸಿಎಂ ಶಿವಕುಮಾರ್ ಅವರು ತಮಿಳುನಾಡಿನ ಜೊತೆ ಶಾಮೀಲಾಗಿ ಆ ರಾಜ್ಯದ ನೀರುಗಂಟಿಯಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ದೆಹಲಿಯಲ್ಲೇ ಇದ್ದ ಶಿವಕುಮಾರ್ ಅವರು ಕಾನೂನು ತಜ್ಞರ ಜೊತೆ ಮಾತನಾಡಿ, ನ್ಯಾಯಾಧೀಕರಣದ ಮುಂದೆ ಯಾವ ರೀತಿ ವಾದ ಮಾಡಬೇಕು ಎಂಬುದನ್ನು ಚರ್ಚೆ ಮಾಡಬೇಕಿತ್ತು. ಆದರೆ ಮಾಡಲಿಲ್ಲ.

ಈಗ ನೀರು ಖಾಲಿಯಾಗ್ತ ಇದೆ. ರಾಜ್ಯದ ಜನರ ಹಿತಾಸಕ್ತಿಗಿಂತ ದೆಹಲಿಯಲ್ಲಿ ರಾಹುಲ್ ಗಾಂಧಿ ಮನೆ ಕಾಯುವುದೇ ಸಿಎಂಗೆ ಮುಖ್ಯವಾಗಿತ್ತು ಎಂದು ದೂರಿದರು,

ರೈತರಿಗೆ ಬೆಳೆ ಬೆಳೆಯಬೇಡಿ ಎಂದು ಸಿಎಂ ಹೇಳಿದ್ದಾರೆ. ಆದರೆ ಅವರಿಗೆ ಪರ್ಯಾಯ ವ್ಯವಸ್ಥೆ ಸಹ ಮಾಡಿಲ್ಲ. ಪರಿಹಾರ ನೀಡಿಲ್ಲ. ಬರಗಾಲ ಸಹ ಘೋಷಣೆ ಮಾಡಿಲ್ಲ. ಕೇಂದ್ರಕ್ಕೆ ವರದಿ ಸಹ ನೀಡಿಲ್ಲ. ರಾಜ್ಯ ಸರ್ಕಾರಕ್ಕೆ ನಾಚಿಕೆಯೇ ಇಲ್ಲವಾಗಿದೆ. ಉತ್ತರ ಕರ್ನಾಟಕದಲ್ಲಿ ಜನ ಗುಳೇ ಹೋಗುತ್ತಿದ್ದಾರೆ. ಇವರ ಗಮನವೆಲ್ಲ ಸಚಿವ ಸಂಪುಟ ರಚನೆ ಮಾಡುವುದರಲ್ಲೇ ಮುಳುಗಿದೆ ಎಂದರು.

ರಾಜ್ಯದ ನದಿಗಳು, ಜಲಾಶಯಗಳು ಖಾಲಿ ಖಾಲಿ. ಅದೇ ರೀತಿ ರಾಜ್ಯದ ಖಜಾನೆ ಸಹ ಖಾಲಿಯಾಗಿದೆ. ಇದೇ ಶಿವಕುಮಾರ್ ಅವರು ಮಾಡಿದ ಸಾಧನೆ.

ಡಿಕೆಶಿ ಸಿಎಂ ಆದ ತಕ್ಷಣ ಬರಗಾಲ ಬಂತು. ಈ ಸರ್ಕಾರ ಜನರ ಪಾಡಿಗೆ ಸತ್ತು ಹೋಗಿದೆ ಎಂದು ವ್ಯಂಗ್ಯವಾಡಿದರು.

ಯಾಕಾದರೂ ಈ ಮನೆಹಾಳು ಕಾಂಗ್ರೆಸ್‌ಗೆ ಓಟು ಹಾಕಿದೆ ಎಂದು ರಾಜ್ಯದ ಜನ ಪಶ್ಚಾತ್ತಾಪ ಪಡ್ತಾ ಇದ್ದಾರೆ. ಶಾಪ ಹಾಕ್ತ ಇದ್ದಾರೆ. ಕೆಆರ್‌ಎಸ್‌ನಿಂದ ಯಾವುದೇ ಕಾರಣಕ್ಕೂ ನೀರು ಬಿಡಬಾರದು ಎಂದು ಆಗ್ರಹಿಸಿದರು.

## ಈ ಸರಕಾರಕ್ಕೆ ರೈತರ ಕಾಳಜಿ ಕಿಂಚಿತ್ತಾದರೂ ಇದೆಯೇ–ಸುಮಲತಾ ಅಂಬರೀಷ್



ಕಾವೇರಿ ನೀರು ಬಿಡುಗಡೆ ವಿಚಾರದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಮಾಜಿ ಸಂಸದೆ ಸುಮಲತಾ ಅಂಬರೀಷ್, ಸರ್ಕಾರಕ್ಕೆ ರೈತರ ಬಗ್ಗೆ ಕಿಂಚಿತ್ತಾದರೂ ಕಾಳಜಿ ಇದೆಯೇ ಎಂದು ಪ್ರಶ್ನಿಸಿದರು. ಮೂರು ವರ್ಷಗಳಾದರೂ ಮೇಕೆದಾಟು ಯೋಜನೆಗೆ ಆದ್ಯತೆ ನೀಡಿಲ್ಲ ಎಂದು ಆರೋಪಿಸಿದ ಅವರು, ರೈತರು ಸಂಕಷ್ಟದಲ್ಲಿದ್ದರೂ ಅವರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸುತ್ತಿಲ್ಲ ಎಂದು ಟೀಕಿಸಿದರು.

ಇದು ಕೇವಲ ರೈತರ ಹೋರಾಟವಲ್ಲ, ಜೀವನದ ಹೋರಾಟವಾಗಿದ್ದು, ಸರ್ಕಾರ ಸ್ಪಷ್ಟ ಉತ್ತರ ನೀಡುವವರೆಗೆ ಹೋರಾಟ ಮುಂದುವರಿಯಬೇಕು ಎಂದು ಅವರು ಹೇಳಿದರು.

# ‘ಕಾವೇರಿ ವಿಷಯದಲ್ಲಿ ಸಿಎಂ ಮೊಸಳೆ ಕಣ್ಣೀರು’

ಡಿ.ಕೆ.ಶಿವಕುಮಾರ್ ಅವರು ಅಧಿಕಾರ ಪಡೆದ ಬಳಿಕ ಅವರಿಗೆ ರೈತರು ಮತ್ತು ಅವರ ಸಂಕಷ್ಟ ಮರೆತುಹೋಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಟೀಕಿಸಿದ್ದಾರೆ.

ಕಾವೇರಿ ನದಿ ನೀರಿನ ವಿಚಾರದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ವೈಫಲ್ಯವನ್ನು ಖಂಡಿಸಿ ಇಂದು ಶ್ರೀರಂಗಪಟ್ಟಣದ ಕೆ.ಆರ್.ಎಸ್ ಡ್ಯಾಂ ಬಳಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹಿಂದೆ ಡಿ.ಕೆ.ಶಿವಕುಮಾರ್ ಅವರು ಮೇಕದಾಟು ಸಂಬಂಧ ಪಾದಯಾತ್ರೆ ಮಾಡಿದ್ದರು ಎಂದು ನೆನಪಿಸಿದರು.

**ಸರ್ವ ಪಕ್ಷ ಸಭೆ ಕರೆದಿದ್ದಾರೆ;** ಅದು ಊರು ಕೊಳ್ಳೆ ಹೊಡೆದ ಮೇಲೆ ಕೋಟೆ ಬಾಗಿಲು ಹಾಕಿದಂತಿದೆ ಎಂದು ಆರೋಪಿಸಿದರು. ತಮಿಳುನಾಡಿಗೆ ಕಳೆದ 3 ತಿಂಗಳಿನಲ್ಲಿ ಸಾಕಷ್ಟು ನೀರನ್ನು ಹರಿಬಿಟ್ಟಿದ್ದಾರೆ. ಆಗ ಡಿ.ಕೆ.ಶಿವಕುಮಾರ್ ಅವರಿಗೆ ಸರ್ವಪಕ್ಷ ಕರೆಯಬೇಕೆಂದು ಅನಿಸಲಿಲ್ಲವೇ ಎಂದು ಪ್ರಶ್ನಿಸಿದರು. ಮೊಸಳೆಕಣ್ಣೀರು ಹಾಕುತ್ತಿದ್ದಾರೆ ಎಂದು ದೂರಿದರು. ಯಾವುದೇ ಕಾರಣಕ್ಕೂ ಕಾವೇರಿ ಕೊಳ್ಳದ ರೈತರಿಗೆ ಅನ್ಯಾಯ ಮಾಡಲು ಅವಕಾಶ ಕೊಡುವುದಿಲ್ಲ ಎಂದು ಎಚ್ಚರಿಸಿದರು.

ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ವಿಧಾನಸಭೆಯ ವಿಪಕ್ಷ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಂಸದರಾದ ಸುಮಲತಾ ಅಂಬರೀಷ್, ಮಾಜಿ ಸಚಿವ ಎನ್.ಮಹೇಶ್, ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ಶಾಸಕ ಟಿ.ಎಸ್. ಶ್ರೀವತ್ಸ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಜೆ. ಗೌಡ, ರಾಜ್ಯ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್, ಸ್ಥಳೀಯ ಜನಪ್ರತಿನಿಧಿಗಳು ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು. ಹಾಸನ, ಮಂಡ್ಯ, ಮೈಸೂರು ಮೊದಲಾದ ಜಿಲ್ಲೆಗಳ ಜನಪ್ರತಿನಿಧಿಗಳು, ಮುಖಂಡರು ಮತ್ತು ಕಾರ್ಯಕರ್ತರೂ ಭಾಗವಹಿಸಿದ್ದರು.



# ಬರ ನಿರ್ವಹಣೆಯಲ್ಲಿ ಸರ್ಕಾರ ವಿಫಲ: ಕುಮಾರಸ್ವಾಮಿ

1ನೇ ಪುಟದಿಂದ

ಸಂಪುಟ ವಿಸ್ತರಣೆ ಹೆಸರುಗಳನ್ನು ನಿಮ್ಮ ಪಕ್ಷದ ಹೈಕಮಾಂಡ್ ಅಂತಿಮಗೊಳಿಸುತ್ತದೆ. ಇಲ್ಲಿ ಕೆಲಸ ಮಾಡುವುದು ಬಿಟ್ಟು ಅಲ್ಲಿ ಹೋಗಿ ಏನು ಮಾಡುತ್ತಿದ್ದೀರಿ ಎಂದು ಸಚಿವರು ಕಾಂಗ್ರೆಸ್ ನಾಯಕರನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ರಾಜ್ಯದಲ್ಲಿ ಸರ್ಕಾರ ಇದೆ ಎಂದು ಭಾವನೆಯನ್ನೇ ಮಾಡಿಲ್ಲ. ಮುಖ್ಯವಾಗಿ ಈ ಸರ್ಕಾರ ಟೇಕಾಫ್ ಆಗಿಯೇ ಇಲ್ಲ. ಮಂತ್ರಿಗಿರಿ, ಸಂಪುಟ ವಿಸ್ತರಣೆ ಇವೆಲ್ಲವುಗಳನ್ನು ಪಕ್ಕಕ್ಕಿಟ್ಟು ಮೊದಲು ಸರ್ಕಾರ ರೈತರ ನೆರವಿಗೆ ಧಾವಿಸಬೇಕು ಎಂದು ಕುಮಾರಸ್ವಾಮಿ ಅವರು ಒತ್ತಾಯ ಮಾಡಿದರು.

ಕಾವೇರಿ ವಿಷಯಕ್ಕಾಗಿ ಮುಖ್ಯಮಂತ್ರಿಗಳು ಸರ್ವಪಕ್ಷ ಸಭೆ ಕರೆದಿದ್ದಾರೆ. ರಾಜ್ಯದ ರೈತರಹಿತಕ್ಕಾಗಿ ನಾವು ಸಭೆಯಲ್ಲಿ ಪಾಲ್ಗೊಳ್ಳುತ್ತೇವೆ. ನಮ್ಮ ವಾದವನ್ನು ಪ್ರಬಲವಾಗಿ ಮಂಡಿಸುತ್ತೇವೆ ಎಂದ ಕೇಂದ್ರ ಸಚಿವರು;

ಸರ್ವಪಕ್ಷ ಸಭೆ ಕರೆಯುವುದು ಹೊಸ ವಿಚಾರವೇನಲ್ಲ. ಸಭೆಯಲ್ಲಿ ರಾಜ್ಯದ ಇದಕ್ಕಾಗಿ ಎಲ್ಲ ಪಕ್ಷಗಳು ಒಗ್ಗಟ್ಟಾಗಿ ನಿರ್ಣಯ ಅಂಗೀಕರಿಸಬೇಕು ಎಂಬುದು ನನ್ನ ಮನವಿ.

ಆದರೆ ಕಾವೇರಿ ಪ್ರಾಧಿಕಾರದ ಮುಂದೆ ರಾಜ್ಯ ಸರ್ಕಾರದ ಕಡೆಯಿಂದ ಯಾವ ರೀತಿಯ ವಾದ ಮಂಡನೆ ಆಗಿದೆ ಎಂಬುದು ನಮಗೆ ಗೊತ್ತಿಲ್ಲ. ಪ್ರಾಧಿಕಾರದ ತೀರ್ಮಾನ ತಪ್ಪು ಎಂದು ನಾನು ಈಗಾಗಲೇ ಸ್ಪಷ್ಟಪಡಿಸಿದ್ದೇನೆ ಎಂದು ಸಚಿವ ಕುಮಾರಸ್ವಾಮಿ ಅವರು ಹೇಳಿದರು.

ಪ್ರತಿ ಸಂದರ್ಭದಲ್ಲಿಯೂ ನೀರಿನ ಕೊರತೆ ಉಂಟಾದಾಗ ಕರ್ನಾಟಕವನ್ನು ಬಲಿಪಶುವನ್ನಾಗಿ ಮಾಡಲಾಗುತ್ತಿದೆ. ಇದನ್ನು ಒಪ್ಪಲು ಸಾಧ್ಯವಿಲ್ಲ. ರಾಜ್ಯದಲ್ಲಿರುವ ಕಾವೇರಿ ಕಣಿವೆಯ ಅಣೆಕಟ್ಟುಗಳಲ್ಲಿರುವ ನೀರಿನ ಪರಿಸ್ಥಿತಿಯ ಬಗ್ಗೆ ಪ್ರಾಧಿಕಾರ ತಿಳಿದುಕೊಳ್ಳಬೇಕು. ಹಾಗೆಯೇ ತಮಿಳುನಾಡಿನ ಮೆಟ್ಟೂರು ಮತ್ತು ಭವಾನಿ ಜಲಾಶಯಗಳಲ್ಲಿ ಸಂಗ್ರಹ ಇರುವ ನೀರಿನ ಮಟ್ಟದ ಬಗ್ಗೆಯೂ ಮಾಹಿತಿ ಪಡೆಯಬೇಕು.

ಇಷ್ಟಕ್ಕೂ ತಮಿಳುನಾಡು ಕುಡಿಯುವ ಉದ್ದೇಶಕ್ಕೆ ನೀರು ಕೇಳುತ್ತಿದೆಯೋ ಅಥವಾ ಕೃಷಿ ಉದ್ದೇಶಕ್ಕೆ ನೀರು ಕೇಳುತ್ತಿದೆಯೋ ಎಂಬುದು ಗೊತ್ತಿಲ್ಲ. ಇದರ ಬಗ್ಗೆ ರಾಜ್ಯ ಸರ್ಕಾರ ಖಚಿತ ಮಾಹಿತಿ ಪಡೆಯಬೇಕು. ನಮ್ಮ ರೈತರಿಗೆ ನೀರು ಬಿಡಲು ಸಾಧ್ಯವೇ ಆಗುತ್ತಿಲ್ಲ. ಇಂತಹ ಕಠಿಣ ಪರಿಸ್ಥಿತಿಯಲ್ಲಿ ನೆರೆ ರಾಜ್ಯಕ್ಕೆ ನೀರು ಹರಿಸುವುದು ಸಾಧ್ಯವಾಗದ ಮಾತು ಎಂದು ಅವರು ಒತ್ತಿ ಹೇಳಿದರು.

ಕಾವೇರಿ ವಿಚಾರವಾಗಿ ಕರೆಯಲಾಗಿರುವ ಸರ್ವಪಕ್ಷ ಸಭೆಯಲ್ಲಿ ಜೆಡಿಎಸ್ ಭಾಗವಹಿಸುವುದಾಗಿ ತಿಳಿಸಿದ ಅವರು, ರಾಜ್ಯದ ಹಿತಾಸಕ್ತಿಯನ್ನು ಬಲವಾಗಿ ಮಂಡಿಸಲಾಗುವುದು ಎಂದರು.

ಎಲ್ಲಾ ಅಂಶಗಳ ಬಗ್ಗೆ ಸರ್ವಪಕ್ಷ ಸಭೆಯಲ್ಲಿ ಚರ್ಚೆ ನಡೆಸಲಾಗುವುದು. ಅಲ್ಲದೆ ರಾಜ್ಯದ ನೀರಾವರಿ ಹಿತಾಸಕ್ತಿಗಾಗಿ ಸರ್ಕಾರಕ್ಕೆ ಕೆಲವು ಕಠಿಣ ಒತ್ತಾಯಗಳನ್ನು ಮಾಡಲಾಗುವುದು ಎಂದು ಕುಮಾರಸ್ವಾಮಿ ಅವರು ಪ್ರಶ್ನೆ ಒಂದಕ್ಕೆ ಉತ್ತರಿಸಿದರು.

ಮಾಜಿ ಸಚಿವರಾದ ಸಿ.ಎಸ್. ಪುಟ್ಟರಾಜು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಡಿ. ರಮೇಶ್ ಮತ್ತು ಹಿರಿಯ ಮುಖಂಡ ರಾಮಚಂದ್ರ ಸೇರಿದಂತೆ ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ರೈತರ ಸಂಕಷ್ಟಕ್ಕೆ ರಾಜ್ಯ ಸರ್ಕಾರ ತಕ್ಷಣ ಸ್ಪಂದಿಸಬೇಕು: ಬಿ.ವೈ. ವಿಜಯೇಂದ್ರ

www.vikramavahini.com | ಮಂಡ್ಯ

ತಾಲೂಕಿನ ಬೀಚನಹಳ್ಳಿ ಗ್ರಾಮದಲ್ಲಿ ಸಾಲದ ಬಾಧೆ ತಾಳಲಾರದೆ ರೈತ ದಂಪತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಅತ್ಯಂತ ದುಃಖಕರ ಮತ್ತು ನೋವಿನ ಸಂಗತಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.

ಮಂಡ್ಯ ತಾಲೂಕಿನ ಬೀಚನಹಳ್ಳಿ ಗ್ರಾಮದ ಪುಟ್ಟಸ್ವಾಮಿ ಮತ್ತು ನಾಗಮ್ಮ ದಂಪತಿ ಒಂದೇ ಮರಕ್ಕೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವುದು ರಾಜ್ಯದ ರೈತರ ಸಂಕಷ್ಟದ ಪ್ರತಿಬಿಂಬವಾಗಿದೆ ಎಂದು ಅವರು ಹೇಳಿದರು.

ಸುಮಾರು ಐದು ಎಕರೆ ಜಮೀನಿನಲ್ಲಿ ಟೊಮ್ಯಾಟೊ ಹಾಗೂ ಇತರೆ ತರಕಾರಿ ಬೆಳೆ ಬೆಳೆದಿದ್ದರೂ, ನಿರಂತರ ನಷ್ಟ ಮತ್ತು ಸಾಲದ ಒತ್ತಡದಿಂದ ಹೊರಬರಲು ಸಾಧ್ಯವಾಗದೆ ಸುಮಾರು ರೂ10 ರಿಂದ ರೂ15 ಲಕ್ಷ ಸಾಲ ಮಾಡಿಕೊಂಡಿದ್ದರು. ಬಡ್ಡಿಯನ್ನೂ ಕಟ್ಟಲು ಸಾಧ್ಯವಾಗದ ಪರಿಸ್ಥಿತಿ ಎದುರಾದ ಪರಿಣಾಮ ಆತ್ಮಹತ್ಯೆಗೆ ಶರಣಾಗಿರುವುದು ಅತ್ಯಂತ ದುರದೃಷ್ಟಕರ ಎಂದು ವಿಷಾದ ವ್ಯಕ್ತಪಡಿಸಿದರು.

ಭಾರತೀಯ ಜನತಾ ಪಕ್ಷದ ತಂಡಗಳು ರಾಜ್ಯದ ಮೂಲೆ ಮೂಲೆಗಳಲ್ಲಿ ಸಂಚರಿಸಿ ರೈತರ ಪರಿಸ್ಥಿತಿಯನ್ನು ಅಧ್ಯಯನ ಮಾಡುತ್ತಿವೆ. ಮಳೆಯ ಕೊರತೆಯಿಂದ ರೈತರು



ತೀವ್ರ ಸಂಕಷ್ಟ ಎದುರಿಸುತ್ತಿದ್ದು, ಸರ್ಕಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕಾಗಿದೆ ಎಂದು ವಿಜಯೇಂದ್ರ ಹೇಳಿದರು.

ಮಳೆಯ ಅಭಾವದಿಂದ ಸಂಕಷ್ಟದಲ್ಲಿರುವ ತಾಲೂಕುಗಳನ್ನು ತಕ್ಷಣ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು ಎಂದು ಅವರು ಆಗ್ರಹಿಸಿದರು. ಸಂಕಷ್ಟದಲ್ಲಿರುವ ರೈತರ ಸಾಲ ಮನ್ನಾ ಮಾಡುವುದರ ಜೊತೆಗೆ ಸೂಕ್ತ ಪರಿಹಾರ ಪ್ಯಾಕೇಜ್ ಘೋಷಿಸಿ ನೆರವು ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ರೈತರ ಸಂಕಷ್ಟಕ್ಕೆ ಸರ್ಕಾರ ತಕ್ಷಣ ಸ್ಪಂದಿಸದಿದ್ದರೆ, ರೈತರ ಪಾಲಿಗೆ ಈ ಸರ್ಕಾರ ಬದುಕಿದ್ದರೂ ಸತ್ತಂತೆಯೇ ಆಗಲಿದೆ ಎಂದು ವಿಜಯೇಂದ್ರ ಟೀಕಿಸಿದರು. ಮುಖ್ಯಮಂತ್ರಿ ಕೂಡಲೇ ರಾಜ್ಯ ಪ್ರವಾಸ ಕೈಗೊಂಡು ರೈತರ ಸಮಸ್ಯೆಗಳನ್ನು ನೇರವಾಗಿ ಆಲಿಸಿ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ‘ಸಿಡಬ್ಲ್ಯೂಸಿಗೆ ಮನವರಿಕೆ ಮಾಡಿಕೊಟ್ಟಿಲ್ಲ’



ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ನೀರಿನ ಕೊರತೆ ಬಗ್ಗೆ ಸಿಡಬ್ಲ್ಯೂಸಿಗೆ ರಾಜ್ಯ ಸರ್ಕಾರ ಮನವರಿಕೆ ಮಾಡಿಕೊಟ್ಟಿಲ್ಲ. ಯಾವ ಸಮಯದಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕಿತ್ತೋ ಅದನ್ನು ಸರ್ಕಾರ ಮಾಡಲಿಲ್ಲ ಎಂದು ದೂರಿದರು.

ಬಿಜೆಪಿ ಮೇಲೆ ಗೂಬೆ ಕೂರಿಸುವುದನ್ನು ಬಿಟ್ಟು ಕಾಂಗ್ರೆಸ್ ಸರ್ಕಾರ ರೈತರ ಹಿತ ಕಾಪಾಡುವ ಕೆಲಸವನ್ನು ಮಾಡಬೇಕು. ಯಾವುದೇ ಕಾರಣಕ್ಕೂ ಕೆಆರ್‌ಎಸ್‌ನಿಂದ ನೀರು ಬಿಡಲ್ಲ ಎಂದು ಸರ್ಕಾರ ಹೇಳಿದರೆ ಸರ್ಕಾರದ ಜೊತೆ ಬಿಜೆಪಿ ಕೈ ಜೋಡಿಸಲಿದೆ ಎಂದರು.

# ಬೆಂಗಳೂರುದಲ್ಲಿ ಆಸ್ಟ್ರೇಲಿಯಾ ಕಾನ್ಸುಲೇಟ್, ನ್ಯೂಸೌತ್ ವೇಲ್ಸ್ ವಿವಿ ಕ್ಯಾಂಪಸ್ ಆರಂಭ



www.vikramavahini.com | ಬೆಂಗಳೂರು

ಆಸ್ಟ್ರೇಲಿಯಾದ ಸುಸಜ್ಜಿತ ಕಾನ್ಸುಲೇಟ್ ಜನರಲ್ ಕಚೇರಿ ಮತ್ತು ಆ ರಾಷ್ಟ್ರದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಲ್ಲಿ ಒಂದಾಗಿರುವ ನ್ಯೂಸೌತ್ ವೇಲ್ಸ್ ವಿಶ್ವವಿದ್ಯಾಲಯದ ಬೆಂಗಳೂರು ಕ್ಯಾಂಪಸ್ ಎರಡಕ್ಕೂ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಶುಕ್ರವಾರ ಇಲ್ಲಿ ಚಾಲನೆ ನೀಡಿದರು.

ವಿಶ್ವವಿದ್ಯಾಲಯ ಕ್ಯಾಂಪಸ್ ಉದ್ಘಾಟನೆ ನಂತರ ಮಾತನಾಡಿದ ಅವರು, ‘ನ್ಯೂಸೌತ್ ವೇಲ್ಸ್ ವಿಶ್ವವಿದ್ಯಾಲಯವು ಜಗತ್ತಿನಲ್ಲಿ ಅಗ್ರಸ್ಥಾನದಲ್ಲಿರುವ 20 ವಿಶ್ವವಿದ್ಯಾಲಯಗಳಲ್ಲಿ ಒಂದಾಗಿದ್ದು, ಆಸ್ಟ್ರೇಲಿಯಾದ ಅಗ್ರ ವಿ.ವಿ. ಆಗಿದೆ. ಇದರ ಬೆಂಗಳೂರು ಕ್ಯಾಂಪಸ್ ಹೆಬ್ಬಾಳದ ಸಮೀಪದಲ್ಲಿರುವ ಮಾನ್ಯತಾ ಟೆಕ್ ಪಾರ್ಕಿನಲ್ಲಿ ಇರಲಿದೆ. ರಾಜ್ಯದ ಯುವಜನರು ಮನೆಯ ಹತ್ತಿರದಲ್ಲೇ ಜಾಗತಿಕ ಗುಣಮಟ್ಟದ ಶಿಕ್ಷಣ ಪಡೆಯಲು ಈ ಕ್ಯಾಂಪಸ್ ಇನ್ನುಮುಂದೆ ಲಭ್ಯವಾಗಲಿದೆ. ಇದು ರಾಜ್ಯದಲ್ಲಿ ಕ್ಯಾಂಪಸ್ ತೆರೆಯುತ್ತಿರುವ 6ನೇ ವಿದೇಶಿ ವಿ.ವಿ. ಆಗಿದೆ’ ಎಂದಿದ್ದಾರೆ.

ನ್ಯೂಸೌತ್ ವೇಲ್ಸ್ ವಿ.ವಿ.ಯು ಆಸ್ಟ್ರೇಲಿಯಾದಲ್ಲಿ ತಾನು ಅನುಸರಿಸುವ ಪಠ್ಯಕ್ರಮ ಮತ್ತು ಬೋಧನಾ ವಿಧಾನವನ್ನೇ ಇಲ್ಲೂ ಅಳವಡಿಸಿಕೊಳ್ಳಲಿದೆ. ಸದ್ಯಕ್ಕೆ ಬಿಝಿನೆಸ್, ಕಂಪ್ಯೂಟರ್ ಸೈನ್ಸ್, ಡೇಟಾ ಸೈನ್ಸ್ ಮತ್ತು ಡಿಸಿಷನ್ಸ್ ವಿಷಯಗಳಲ್ಲಿ ಪದವಿ ಹಾಗೂ ಒಂದು ವರ್ಷ ಅವಧಿಯ ಸೈಬರ್ ಸೆಕ್ಯುರಿಟಿ ವಿಷಯದಲ್ಲಿ ಸ್ನಾತಕೋತ್ತರ ಪದವಿ ಕೋರ್ಸುಗಳನ್ನು ಆರಂಭಿಸುತ್ತಿದೆ. ಪ್ರತಿಯೊಂದು ಕೋರ್ಸಿನಲ್ಲೂ ತಲಾ 30 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಇರಲಿದೆ ಎಂದು ಅವರು ಹೇಳಿದ್ದಾರೆ.

ರಾಜ್ಯದಲ್ಲಿ ಈಗಾಗಲೇ ಲಿವರ್ಪೂಲ್, ಲ್ಯಾಂಕಾಸ್ಟರ್, ಲಾ ಟ್ರೋಬ್, ಫ್ಲಿಂಡರ್ಸ್ ಮತ್ತು ಲಂಡನ್ನಿನ ಇಂಪೀರಿಯಲ್ ಕಾಲೇಜ್ ವಿ.ವಿ.ಗಳು ತಮ್ಮ ಕ್ಯಾಂಪಸ್ ತೆರೆದಿವೆ. ಮುಂದಿನ ದಿನಗಳಲ್ಲಿ ಮತ್ತೊಂದಿಷ್ಟು ಜಾಗತಿಕ ಮಟ್ಟದ ವಿ.ವಿ.ಗಳು ನಮ್ಮಲ್ಲಿ ತಮ್ಮ ಕ್ಯಾಂಪಸ್ ತೆಗೆಯಲಿವೆ. ನಮ್ಮಲ್ಲಿರುವ ವಿಶ್ವ ದರ್ಜೆಯ ಸಂಶೋಧನಾ ಸಂಸ್ಥೆಗಳು, ಕೈಗಾರಿಕೋದ್ಯಮಗಳು ಮತ್ತು ನವೋದ್ಯಮ ಕಾರ್ಯಪರಿಸರಗಳು ಇದಕ್ಕೆ ಹೇಳಿ ಮಾಡಿಸಿದಂತಿವೆ ಎಂದು ಅವರು ವಿವರಿಸಿದ್ದಾರೆ.

ಕಾನ್ಸುಲೇಟ್ ಜನರಲ್ ಕಚೇರಿ ಆರಂಭದಿಂದ ನಮ್ಮ ದ್ವಿಪಕ್ಷೀಯ ಬಾಂಧವ್ಯವು ದೀರ್ಘಕಾಲೀನ ದೃಷ್ಟಿಕೋನದೊಂದಿಗೆ ಮುಂದುವರಿಯಲಿದೆ. ನಾವು ಅತ್ತ ಕಡೆಯಿಂದ ಹೂಡಿಕೆ, ಸಂಸ್ಥೆಗಳು ಮತ್ತು ನಾವೀನ್ಯತೆಯನ್ನು ನಮ್ಮಲ್ಲಿಗೆ ಬರುವುದನ್ನು ಎದುರು ನೋಡುತ್ತಿದ್ದೇವೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

ಎರಡೂ ಕಾರ್ಯಕ್ರಮಗಳಲ್ಲಿ ಆಸ್ಟ್ರೇಲಿಯಾದ ಅಂತಾರಾಷ್ಟ್ರೀಯ ಶಿಕ್ಷಣ ಸಚಿವರಾದ ಜೂಲಿಯನ್ ಹಿಲ್, ಭಾರತದಲ್ಲಿರುವ ಆಸ್ಟ್ರೇಲಿಯನ್ ಹೈಕಮಿಷನರ್ ಫಿಲಿಫ್ ಗ್ರೀನ್, ಕೈಗಾರಿಕಾ ಇಲಾಖೆ ಆಯುಕ್ತರಾದ ಖುಷ್ಬು ಗೋಯಲ್, ಬೆಂಗಳೂರಿನಲ್ಲಿರುವ ಕಾನ್ಸುಲ್ ಜನರಲ್ ಹಿಲರಿ ಮೆಗಿಚಿ, ನ್ಯೂಸೌತ್ ವೇಲ್ಸ್ ವಿವಿ ಕುಲಪತಿ ಪ್ರೊ. ಆಟಿಲಾ ಬ್ರಂಗ್ಸ್ ಭಾಗವಹಿಸಿದ್ದರು.

# ಮೊದಲೇ ಸರ್ವ ಪಕ್ಷ ಸಭೆ ಕರೆಯಬೇಕಿತ್ತು: ಸಿ.ಟಿ.ರವಿ



ನೀರಿನ ಸಮಸ್ಯೆ ಉಲ್ಬಣವಾಗಿರುವ ಈ ಸಂಕಷ್ಟದ ಸಮಯದಲ್ಲಿ ರಾಜ್ಯ ಸರ್ಕಾರ ಸರ್ವ ಪಕ್ಷ ಸಭೆ ಕರೆದಿದೆ. ಇದನ್ನು ಮೊದಲೇ ಮಾಡಬೇಕಿತ್ತು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು ಆಗ್ರಹಿಸಿದರು.

ವಕೀಲರ ತಂಡದ ಜೊತೆ ಸಮಾಲೋಚನೆ ಮಾಡಿ ವಾಸ್ತವಿಕ ಪರಿಸ್ಥಿತಿಯನ್ನು ನ್ಯಾಯಾಲಯಕ್ಕೆ ಸರ್ಕಾರ ಮನವರಿಕೆ ಮಾಡಬೇಕಿತ್ತು. ಆದರೆ ಅದನ್ನು ಮಾಡಲಿಲ್ಲ. ರಾಜ್ಯದ ರೈತರ ಹಿತಕ್ಕಿಂತ ಶಾಸಕರಿಗೆ ಅಧಿಕಾರ ನೀಡುವುದೇ ಸಿಎಂಗೆ ಮುಖ್ಯವಾಗಿದೆ. ಈಗ ರಾತ್ರೋರಾತ್ರಿ ತಮಿಳುನಾಡಿಗೆ ಕದ್ದುಮುಚ್ಚಿ ನೀರು ಬಿಡುತ್ತಿದ್ದೀರಿ. ನಾವು ತಮಿಳುನಾಡಿನ ವಿರೋಧಿಗಳಲ್ಲ. ಆದರೆ ವಾಸ್ತವ ಸ್ಥಿತಿಯನ್ನು ಅರ್ಥ ಮಾಡಿಸಬೇಕಿತ್ತು ಎಂದು ತಿಳಿಸಿದರು.

ಡಿ.ಕೆ.ಶಿವಕುಮಾರ್ ಅವರೇ ಕರ್ನಾಟಕದ ಜನರಿಗೆ ದ್ರೋಹ ಮಾಡಬೇಡಿ. ನಿಮ್ಮನ್ನು ಬಂಡೆ ಎನ್ನುತ್ತಾರೆ. ಈಗ ನೀವು ಬಂಡೆ ರೀತಿ ನಿಂತು ನೀರು ಬಿಡಬೇಡಿ. ಇಲ್ಲದೇ ಇದ್ದರೆ ಬಂಡೆಗೆ ಡೈನಮೆಟ್ ಅನ್ನು ರಾಜ್ಯದ ಜನ ಇಡುತ್ತಾರೆ ಎಂದು ಎಚ್ಚರಿಸಿದರು. ನಮ್ಮ ನೀರು ನಮ್ಮ ಹಕ್ಕು ಪಾದಯಾತ್ರೆ ಮಾಡಿದ ನೀವು ಈಗ ಜನರ ಹಕ್ಕು ರಕ್ಷಿಸಿ. ನಾಡಿಗೆ ದ್ರೋಹ ಮಾಡಿದರೆ ಜನ ಕ್ಷಮಿಸಲ್ಲ ಎಂದು ಹೇಳಿದರು.



**ಕಾವೇರಿ ನೀರು ಹಂಚಿಕೆ ವಿಚಾರವಾಗಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶದ ಹಿನ್ನೆಲೆಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ವಿಧಾನಸೌಧದದಲ್ಲಿ ಶುಕ್ರವಾರ ಮಂತ್ರಿಗಳು ಹಾಗೂ ಅಧಿಕಾರಿಗಳ ಸಭೆ ನಡೆಸಿದರು. ಡಿಸಿಎಂ ಡಾ. ಜಿ ಪರಮೇಶ್ವರ, ಸಚಿವ ರಾಮಲಿಂಗಾ ರೆಡ್ಡಿ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಹೆಚ್ಚುವರಿ ಮುಖ್ಯಕಾರ್ಯದರ್ಶಿಗಳಾದ ತುಷಾರ್ ಗಿರಿನಾಥ್, ಗೌರವ್ ಗುಪ್ತಾ, ರಾಜೇಶ್ ಕುಮಾರ್ ಕಠಾರಿಯ, ಡಿಜಿಪಿ ಸಲೀಂ ಅಹ್ಮದ್, ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಮತ್ತಿತರರು ಉಪಸ್ಥಿತರಿದ್ದರು.**

# ಸರ್ವಪಕ್ಷ ಸಭೆ ಬಳಿಕ ಕಾವೇರಿ ಬಗ್ಗೆ ತೀರ್ಮಾನ: ಡಿಕೆಶಿ


1ನೇ ಪುಟದಿಂದ

ಬಂಗಾರಪ್ಪನವರ ಕಾಲದಿಂದ ಇಲ್ಲಿಯವರೆಗೂ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗೆಲ್ಲ ನಾವು ರಾಜ್ಯದ ಹಿತಕ್ಕೆ ಅಗತ್ಯ ರಕ್ಷಣೆ ನೀಡಲು ಬದ್ಧತೆ ತೋರಿದ್ದೇವೆ. ಈಗಲೂ ನಾವು ನಮ್ಮ ಕರ್ತವ್ಯಕ್ಕೆ ಬದ್ಧರಾಗಿದ್ದೇವೆ” ಎಂದರು.

“ನಾನು ವಿರೋಧ ಪಕ್ಷದವರನ್ನು ವಿಶ್ವಾಸಕ್ಕೆ ಪಡೆದು, ರಾಜ್ಯದ ಹಿತಕ್ಕೆ ಅವರ ಸಲಹೆ ಪಡೆಯುತ್ತೇವೆ. ಸರ್ವಪಕ್ಷ ಸಭೆಯಲ್ಲಿ ಅವರು ಬರಲಿ, ಅವರ ಸಲಹೆ ನೀಡಲಿ. ರಾಜ್ಯದ ಹಿತಕ್ಕೆ ನಾವು ಬದ್ಧರಾಗೋಣ. ಜುಲೈ ಅಂತ್ಯದವರೆಗೆ ನಾವು ತಮಿಳುನಾಡಿಗೆ 0.6 ಟಿಎಂಸಿ ನೀರನ್ನು ಮಾತ್ರ ತಮಿಳುನಾಡಿಗೆ ಹರಿಸಿದ್ದು, ಕಳೆದ 100 ವರ್ಷಗಳಲ್ಲಿ ತಮಿಳುನಾಡಿಗೆ ಹರಿಸಲಾಗಿರುವ ಅತ್ಯಂತ ಕಡಿಮೆ ಪ್ರಮಾಣದ ನೀರಾಗಿದೆ.

ಇದುವರೆಗೂ ಹರಿದಿರುವ ನೀರು ಅಣೆಕಟ್ಟುಗಳಿಂದ ಬಿಟ್ಟಿರುವ ನೀರಲ್ಲ, ಬೆಂಗಳೂರು ಸುತ್ತಮುತ್ತ ಬಿದ್ದ ಮಳೆ ನೀರು ಹರಿದು ಹೋಗಿರುವ ನೀರಿನ ಪ್ರಮಾಣ. ಇಷ್ಟಾದರೂ ಪ್ರತಿಭಟನೆ ಮಾಡುತ್ತಿದ್ದಾರೆ. ಈ ಮಧ್ಯೆ ಆಗಸ್ಟ್ 13ರಂದು ಬಂದ್ ಗೆ ಕರೆ ನೀಡುವ ಬಗ್ಗೆ ಚರ್ಚೆಯಾಗುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ನಾವೇ ನಿಮ್ಮ ಪರವಾಗಿದ್ದು, ಬಂದ್ ಮಾಡುವ ಅಗತ್ಯವಿಲ್ಲ. ಇದರಿಂದ ಯಾವುದೇ ಪರಿಹಾರ ಸಿಗುವುದಿಲ್ಲ” ಎಂದು ತಿಳಿಸಿದರು.

# ‘ಸಂಪುಟ ವಿಸ್ತರಣೆ ಚರ್ಚೆ ಪೂರ್ಣ, ಫಲಿತಾಂಶಕ್ಕೆ ಕಾಯುತ್ತಿದ್ದೇವೆ’



**ಸಂಪುಟ ವಿಸ್ತರಣೆ ಕುರಿತು ಕಾಂಗ್ರೆಸ್‌ನಲ್ಲಿ ಚರ್ಚೆ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಅಂತಿಮ ತೀರ್ಮಾನ ಪ್ರಕಟವಾಗಲಿದೆ ಎಂದು ಬಿ.ಕೆ. ಹರಿಪ್ರಸಾದ್ ತಿಳಿಸಿದ್ದಾರೆ. ಇದೇ ವೇಳೆ ಬಿಜೆಪಿ ಶಾಸಕ ಯಶ್‌ಪಾಲ್ ಸುವರ್ಣ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕ್ ಹಗರಣಕ್ಕೆ ಎಸ್‌ಐಟಿ ತನಿಖೆ ನಡೆಸುವಂತೆ ಆಗ್ರಹಿಸಿದರು.**

www.vikramavahini.com | ಬೆಂಗಳೂರು

ರಾಜ್ಯ ಸಚಿವ ಸಂಪುಟ ವಿಸ್ತರಣೆ ಕುರಿತು ಕಾಂಗ್ರೆಸ್ ವರಿಷ್ಠ ನಾಯಕರು ಶೀಘ್ರದಲ್ಲೇ ಅಂತಿಮ ತೀರ್ಮಾನ ಕೈಗೊಳ್ಳಲಿದ್ದು, ಎಲ್ಲ ರೀತಿಯ ಚರ್ಚೆಗಳು ಪೂರ್ಣಗೊಂಡಿವೆ. ಈಗ ಫಲಿತಾಂಶಕ್ಕಾಗಿ ಕಾಯುತ್ತಿದ್ದೇವೆ ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತಿಳಿಸಿದ್ದಾರೆ.

ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಸಂಪುಟ ವಿಸ್ತರಣೆ ಕುರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ತಮೊಂದಿಗೆ ಕಾಂಗ್ರೆಸ್ ವರಿಷ್ಠ ನಾಯಕರು ಹಲವು ಸುತ್ತಿನ ಚರ್ಚೆಗಳನ್ನು ನಡೆಸಿದ್ದಾರೆ. ನಾವು ಪರೀಕ್ಷೆ ಬರೆದಿದ್ದೇವೆ, ಈಗ ಫಲಿತಾಂಶಕ್ಕಾಗಿ ಕಾಯುತ್ತಿದ್ದೇವೆ ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಂಚಾಂಗದ ಪ್ರಕಾರ ಭವಿಷ್ಯ ಹಾಗೂ ಶುಭ ಗಳಿಗೆಯನ್ನು ನೋಡಿ ಸಂಪುಟ ವಿಸ್ತರಣೆಗೆ ಮುಹೂರ್ತವನ್ನು ನಿಗದಿಪಡಿಸಲಿದ್ದಾರೆ ಎಂದು ಹೇಳಿದರು.ಬಿಜೆಪಿ ಶಾಸಕ ಯಶ್‌ಪಾಲ್ ಸುವರ್ಣ ಅವರು ರಾಹುಲ್ ಗಾಂಧಿ ವಿರುದ್ಧ ನೀಡಿರುವ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿದ ಹರಿಪ್ರಸಾದ್, ದಾರಿಯಲ್ಲಿ ಹೋಗುವವರೆಲ್ಲಾ ರಾಹುಲ್ ಗಾಂಧಿಯವರನ್ನು ಮುಗಿಸುವುದಾಗಿ ಹೇಳುತ್ತಿದ್ದಾರೆ. ಮಹಾತ ಗಾಂಧಿ ಜೀ ಅವರನ್ನು ಹತ್ಯೆ ಮಾಡಿದ ಗೋಡ್ಸೆ ಸಂತತಿಯ ಜನ ಇವರು ಎಂದರು.

ಬಡವರ ಪರವಾಗಿದ್ದ ಇಂದಿರಾ ಗಾಂಧಿ, ಯುವಕರ ಪರವಾಗಿದ್ದ ರಾಜೀವ್ ಗಾಂಧಿಯವರನ್ನು ಹತ್ಯೆ ಮಾಡಲಾಗಿದೆ. ಬ್ರಿಟಿಷರ ವಿರುದ್ಧ ಹೋರಾಟ ಮಾಡಿ ಜೈಲು ಶಿಕ್ಷೆ ಅನುಭವಿಸಿದ್ದ ಜವಾಹರಲಾಲ್ ನೆಹರು ವಿರುದ್ಧವೂ ಷಡ್ಯಂತ್ರ ನಡೆಸಿದ್ದರು ಎಂದು ಹರಿಪ್ರಸಾದ್ ಕಿಡಿಕಾರಿದರು.

ಮಹಾಲಕ್ಷ್ಮಿ ಕೋ–ಆಪರೇಟಿವ್ ಬ್ಯಾಂಕ್ ಅಧ್ಯಕ್ಷರಾಗಿದ್ದ ಯಶ್‌ಪಾಲ್ ಸುವರ್ಣ ವಿರುದ್ಧ ಗಂಭೀರ ಆರೋಪಗಳಿವೆ. ಕೋವಿಡ್ ಸಂದರ್ಭದಲ್ಲಿ 31 ಜನ ಮಹಿಳೆಯರಿಗೆ ತಲಾ 20 ಸಾವಿರ ಸಾಲ ನೀಡುವುದಾಗಿ ಮನೆ ಮನೆಗೆ ಹೋಗಿ ಈ ವ್ಯಕ್ತ ಹೇಳಿದ್ದರು. ಬಳಿಕ ನಕಲಿ ದಾಖಲೆಗಳನ್ನು ಸೃಷ್ಟಿಸಿ ತಲಾ 2 ಲಕ್ಷ ಸಾಲ ನೀಡಿರುವುದಾಗಿ ತಿಳಿಸಲಾಗಿದೆ.

ಈ ರೀತಿ ಮಹಾಲಕ್ಷ್ಮಿ ಕೋ–ಆಪರೇಟಿವ್ ಬ್ಯಾಂಕ್‌ನಲ್ಲಿ 178 ಕೋಟಿ ಹಣಕಾಸು ಅಕ್ರಮ ನಡೆದಿರುವುದು ಆಡಿಟ್ ವರದಿಯಲ್ಲಿ ಬೆಳಕಿಗೆ ಬಂದಿದೆ.

ಈ ಕುರಿತು ಹಿಂದೆ ಸಿದ್ದರಾಮಯ್ಯ ಅವರ ಸರ್ಕಾರ ತನಿಖೆಗೆ ಆದೇಶಿಸಿದೆ. ಆದರೆ ತನಿಖೆ ನಿಧಾನಗತಿಯಲ್ಲಿ ಸಾಗುತ್ತಿದೆ ಎಂದು ಅವರು ಆರೋಪಿಸಿದರು.

ಮಲ್ಪೆ ಬೀಚ್‌ನ ಬ್ಯಾಂಕ್ ಶಾಖೆಯಲ್ಲಿ ಸಾಲ ವಸೂಲಾತಿ ಕೆಲಸ ಮಾಡುತ್ತಿದ್ದ ದಲಿತ ನೌಕರ ಸುಬ್ಬಣ್ಣ ಅವರ ಆತಹತ್ಯೆಯಾಗಿದೆ. ಅದು ಆತ್ಮಹತ್ಯೆಯಲ್ಲ, ಕೊಲೆಯಾಗಿರಬಹುದೆಂಬ ಶಂಕೆಯನ್ನು ಠೇವಣಿದಾರರು ವ್ಯಕ್ತಪಡಿಸುತ್ತಿದ್ದಾರೆ ಎಂದರು.

ಸುಬ್ಬಣ್ಣ ಅವರ ಸಾವು ಮತ್ತು ಬ್ಯಾಂಕ್ ಹಗರಣದ ಕುರಿತು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಬಿಜೆಪಿ ನಾಯಕರು ಅಲ್ಪಸಂಖ್ಯಾತರ ವಿರುದ್ಧ ದ್ವೇಷದ ಮಾತುಗಳನ್ನಾಡುತ್ತಾರೆ. ಆದರೆ ಯಶ ಪಾಲ್ ಸುವರ್ಣ ಸಾಲದ ವಂಚನೆಯ ಪ್ರಕರಣದಲ್ಲಿ ಅಲ್ಪಸಂಖ್ಯಾತರ ಸಹಿಯಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿದ್ದಾರೆ. ಬಿಜೆಪಿಯವರದು ನಕಲಿ ದೇಶಭಕ್ತಿ. ಮುಂದಿನ ದಿನಗಳಲ್ಲಿ ಇಂತಹ ರಾಜಕಾರಣಕ್ಕೆ ಜನರು ಸೂಕ್ತ ಉತ್ತರ ನೀಡಲಿದ್ದಾರೆ ಎಂದು ತಿರುಗೇಟು ನೀಡಿದರು.

# ಆತ್ಮಹತ್ಯೆಗೆ ಶರಣಾದ ದಂಪತಿ ಮನೆಗೆ ಭೇಟಿ ಕೊಟ್ಟ ಕುಮಾರಸ್ವಾಮಿ

www.vikramavahini.com | ಮಂಡ್ಯ



**ಮಂಡ್ಯದ ಹಟ್ನ ಬೇವುಕಲ್ಲು ಗ್ರಾಮದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತ ದಂಪತಿಯ ಮನೆಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಭೇಟಿ ನೀಡಿ ಕುಟುಂಬಕ್ಕೆ ಸಾಂತ್ವನ ಹೇಳಿದರು. ರೈತರ ಸಂಕಷ್ಟಕ್ಕೆ ಸರ್ಕಾರ ತುರ್ತು ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ ಅವರು, ಯಾವುದೇ ಕಾರಣಕ್ಕೂ ಆತ್ಮಹತ್ಯೆ ಪರಿಹಾರವಲ್ಲ, ಸಮಸ್ಯೆಗಳನ್ನು ಧೈರ್ಯದಿಂದ ಎದುರಿಸಬೇಕು ಎಂದು ರೈತರಿಗೆ ಮನವಿ ಮಾಡಿದರು.**

ಮಂಡ್ಯ ತಾಲ್ಲೂಕಿನ ಹಟ್ನ ಬೇವುಕಲ್ಲು ಗ್ರಾಮದಲ್ಲಿ ರೈತ ದಂಪತಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಬಗ್ಗೆ ತೀವ್ರ ಆಘಾತ ವ್ಯಕ್ತಪಡಿಸಿರುವ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು, ಶುಕ್ರವಾರ ಅವರ ಮನೆಗೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಮಾಜಿ ಸಚಿವ ಸಿ.ಎಸ್. ಪುಟ್ಟರಾಜು, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಜಿಲ್ಲಾ ಜೆಡಿಎಸ್ ಅಧ್ಯಕ್ಷ ರಮೇಶ್ ಇನ್ನಿತರ ಮುಖಂಡರೊಂದಿಗೆ ಆತ್ಮಹತ್ಯೆ ಮಾಡಿಕೊಂಡ ಪುಟ್ಟಸ್ವಾಮಿ ಅವರ ಮನೆಗೆ ಆಗಮಿಸಿದ ಸಚಿವರು; ವೃದ್ಧ ತಾಯಿ, ಮಕ್ಕಳು, ಮೊಮ್ಮಕ್ಕಳಿಗೆ ಸಾಂತ್ವನ ಹೇಳಿ ನೆರವಿನ ಹಸ್ತ ಚಾಚಿದರು.

ಕೃಷಿ ಬೆಳೆಗಳನ್ನು ಇಡುವುದಕ್ಕಾಗಿ ಬ್ಯಾಂಕ್ ಮತ್ತು ವಿವಿಧ ಖಾಸಗಿ ಮೂಲಗಳಿಂದ ಪುಟ್ಟಸ್ವಾಮಿ ಅವರು ಸಾಲ ಮಾಡಿದ್ದರು. ಸಾಲಗಾರರ ಒತ್ತಡದಿಂದ ತೀವ್ರ ಕಂಗೆಟ್ಟಿದ್ದ ಅವರು ತಮ್ಮ ಪತ್ನಿ ನಾಗಮ್ಮ ಅವರೊಂದಿಗೆ ಗುರುವಾರ ನೇಣಿಗೆ ಶರಣಾಗಿದ್ದರು. ತಮ್ಮ ತಾಯಿಯ 11ನೇ ದಿನದ ಉತ್ತರ ಕ್ರಿಯಾದಿ ವಿಧಿ ವಿಧಾನಗಳಲ್ಲಿ ಪಾಲ್ಗೊಂಡಿದ್ದ ಸಚಿವರಿಗೆ ಗುರುವಾರ ತಿಳಿದು ಅವರು ಅತೀವ ದುಃಖ ವ್ಯಕ್ತಪಡಿಸಿದ್ದರು.

ಬೆಳಗ್ಗೆ ಹಾಸನದಿಂದ ನೇರವಾಗಿ ಮಂಡ್ಯ ತಾಲೂಕಿನ ಹಟ್ನ ಬೇವುಕಲ್ಲು ಗ್ರಾಮಕ್ಕೆ ಬಂದ ಸಚಿವರು, ವಿಶೇಷವಾಗಿ ಪುಟ್ಟಸ್ವಾಮಿ ಅವರ ವೃದ್ಧ ತಾಯಿಯವರಿಗೆ ಧೈರ್ಯ ಹೇಳಿದರು. ಅವರ ಪುತ್ರ ಸ್ವಾಮಿ ಮತ್ತು ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿ ಯಾವುದೇ ಕಾರಣಕ್ಕೂ ಎದೆಗುಂದಬೇಡಿ. ನಿಮ್ಮ ಜತೆ ನಾನಿದ್ದೇನೆ ಎಂದು ಧೈರ್ಯ ತುಂಬಿದರು. ಅಲ್ಲದೆ, ಈ ಕುಟುಂಬಕ್ಕೆ ಅಗತ್ಯ ನೆರವು ಒದಗಿಸುವ ಸಂಬಂಧ ಪುಟ್ಟರಾಜು ಅವರೊಂದಿಗೆ ಚರ್ಚಿಸಿದರು.

ಅಲ್ಲದೆ ದಂಪತಿಯ ಸಾವಿಗೆ ಕಾರಣವಾದ ಅಂಶಗಳ ಬಗ್ಗೆ ಸಚಿವರು ಮೃತ ಪುಟ್ಟಸ್ವಾಮಿ ಅವರ ಪುತ್ರ ಸ್ವಾಮಿ ಅವರಿಂದ ಮಾಹಿತಿ ಪಡೆದುಕೊಂಡರು. ಈ ಸಂಬಂಧ ಸ್ಥಳದಲ್ಲಿದ್ದ ಕಂದಾಯ ಅಧಿಕಾರಿಗಳ ಜತೆ ಸಚಿವರು ಮಾತನಾಡಿ, ದುಃಖತಪ್ತ ಕುಟುಂಬಕ್ಕೆ ಸಿಗಬೇಕಾದ ಎಲ್ಲ ಪರಿಹಾರಗಳನ್ನು ಒದಗಿಸುವಂತೆ ಸೂಚಿಸಿದರು.

ಅಜ್ಜಿಯನ್ನು ಚೆನ್ನಾಗಿ ನೋಡಿಕೊಳ್ಳುವಂತೆ ಪುಟ್ಟಸ್ವಾಮಿಯವರ ಪುತ್ರ ಸ್ವಾಮಿಗೆ ಹೇಳಿದ ಸಚಿವರು, ಏನೇ ಸಮಸ್ಯೆ ಬಂದರೂ ತಮ್ಮನ್ನು ಭೇಟಿ ಆಗುವಂತೆ ತಿಳಿಸಿದರು.

ದಂಪತಿ ಸುಮಾರು ಐದು ಎಕರೆ ಜಮೀನು ಹೊಂದಿದ್ದರು. ವಿವಿಧ ಕಾರಣಗಳಿಗೆ ಕೈಸಾಲ ಮಾಡಿಕೊಂಡಿದ್ದರು. ಈ ಬಾರಿ ಮಳೆ ಕೊರತೆಯಿಂದ ಬೆಳೆ ಇಲ್ಲದ ಕಾರಣ ಬೆಳೆ ನಷ್ಟ, ಮತ್ತೊಂದೆಡೆ ಸಾಲಗಾರರ ಕಾಟದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಗ್ರಾಮಸ್ಥರು ಸಚಿವರಿಗೆ ತಿಳಿಸಿದರು.

ರೈತರ ಸಮಸ್ಯೆಗಳ ಬಗ್ಗೆ ಸರ್ಕಾರ ಗಂಭೀರವಾಗಿ ಗಮನಹರಿಸಿ, ಸಾಲದ ಒತ್ತಡ ಹಾಗೂ ಬೆಳೆ ನಷ್ಟದಿಂದ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ತ್ವರಿತ ನೆರವು ನೀಡಬೇಕು ಎಂದು ಕುಮಾರಸ್ವಾಮಿ ಒತ್ತಾಯಿಸಿದರು. ಇಂತಹ ದುರಂತಗಳು ಮರುಕಳಿಸದಂತೆ ಶಾಶ್ವತ ಪರಿಹಾರ ಕ್ರಮಗಳನ್ನು ಕೈಗೊಳ್ಳುವ ಅಗತ್ಯವಿದೆ ಎಂದರು.

ಗ್ರಾಮಸ್ಥರೊಂದಿಗೆ ಮಾತುಕತೆ ನಡೆಸಿದ ಅವರು, ಪ್ರದೇಶದಲ್ಲಿನ ಮಳೆ ಕೊರತೆ, ಬೆಳೆ ಹಾನಿ ಹಾಗೂ ರೈತರು ಎದುರಿಸುತ್ತಿರುವ ಆರ್ಥಿಕ ಸಂಕಷ್ಟದ ಕುರಿತು ಮಾಹಿತಿ ಪಡೆದರು. ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರ ಕಲ್ಪಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಕುಟುಂಬದ ಸದಸ್ಯರಿಗೆ ವೈಯಕ್ತಿಕವಾಗಿ ಧೈರ್ಯ ತುಂಬಿದ ಸಚಿವರು, ಮಕ್ಕಳ ಶಿಕ್ಷಣ ಹಾಗೂ ಕುಟುಂಬದ ಭವಿಷ್ಯಕ್ಕೆ ಅಗತ್ಯ ನೆರವು ಒದಗಿಸುವ ನಿಟ್ಟಿನಲ್ಲಿ ಸಾಧ್ಯವಾದ ಸಹಕಾರ ನೀಡಲಾಗುವುದು ಎಂದು ತಿಳಿಸಿದರು. ದುಃಖದ ಸಮಯದಲ್ಲಿ ಕುಟುಂಬದೊಂದಿಗೆ ನಿಲ್ಲುವುದು ಸಮಾಜದ ಜವಾಬ್ದಾರಿಯೂ ಆಗಿದೆ ಎಂದರು. ಮೃತ ರೈತ ದಂಪತಿಗೆ ಶ್ರದ್ಧಾಂಜಲಿ ಸಲ್ಲಿಸಿದ ಅವರು, ಇಂತಹ ಘಟನೆಗಳು ಮರುಕಳಿಸದಂತೆ ರೈತರ ಹಿತಾಸಕ್ತಿಗೆ ಆದ್ಯತೆ ನೀಡಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ರೈತರು ಯಾವುದೇ ಕಾರಣಕ್ಕೂ ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿಗೆ ಹೋಗಬಾರದು. ಏನೇ ಸಮಸ್ಯೆ ಬಂದರೂ ಧೈರ್ಯವಾಗಿ ಎದುರಿಸಬೇಕು. ತಮ್ಮನ್ನು ನಂಬಿದ ಜನ ಇರುತ್ತಾರೆ ಎನ್ನುವುದು ಮರೆಯಬಾರದು ಎಂದು ಸಚಿವರು ಮನವಿ ಮಾಡಿದರು.

# ಕಾವೇರಿ ನೀರಿನ ಬಿಡುಗಡೆ ಆದೇಶ ಖಂಡಿಸಿ ಪೋಷಕ ಕಲಾವಿದರ ಸಂಘದಿಂದ ಖಾಲಿ ಬಿಂದಿಗೆ ಪ್ರತಿಭಟನೆ

www.vikramavahini.com | ಬೆಂಗಳೂರು

ತಮಿಳುನಾಡಿಗೆ ಪ್ರತಿದಿನ 3,500 ಕ್ಯುಸೆಕ್ ಕಾವೇರಿ ನೀರನ್ನು ಹರಿಸಬೇಕು ಎಂದು ಕಾವೇರಿ ನೀರು ನಿಯಂತ್ರಣ ಸಮಿತಿಯು ನೀಡಿರುವ ಆದೇಶವನ್ನು ಖಂಡಿಸಿ, ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘದ ವತಿಯಿಂದ ನಗರದ ಫ್ರೀಡಂ ಪಾರ್ಕ್ ಮುಂಭಾಗ ಖಾಲಿ ಬಿಂದಿಗೆ ಇಟ್ಟು ಪ್ರತಿಭಟನೆ ಹಾಗೂ ಅಣಕು ಪ್ರದರ್ಶನ ನಡೆಸಲಾಯಿತು.

ಹಿರಿಯ ಕಲಾವಿದ ಡಿಂಗ್ರಿ ನಾಗರಾಜ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಕಾವೇರಿ ನೀರಿನ ವಿಚಾರದಲ್ಲಿ ಕರ್ನಾಟಕದ ಹಿತಾಸಕ್ತಿಯನ್ನು ಕಾಪಾಡಬೇಕು ಹಾಗೂ ರಾಜ್ಯದ ರೈತರ ಮತ್ತು ಜನರ ಹಿತಕ್ಕೆ ಆದ್ಯತೆ ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಕಾವೇರಿ ನೀರಿನ ಹಂಚಿಕೆ ಕುರಿತು ರಾಜ್ಯಕ್ಕೆ ಅನ್ಯಾಯವಾಗದಂತೆ ಸರ್ಕಾರವು ದೃಢ ನಿಲುವು ತಾಳಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಹಿರಿಯ ಕಲಾವಿದರಾದ ವೈದ್ಯನಾಥ ಬಿರಾದರ್, ಗೌರವಾಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ, ಗಣೇಶ್ ರಾವ್ ನವನೀತಂ,ಪುಷ್ಪ ಸ್ವಾಮಿ, ಸುಲೋಚನಾ ರೈ, ಕವನ ಭೂಮಿಕಾ ರೆಡ್ಡಿ, ಜೂನಿಯರ್ ಜಗ್ಗಿ ಸೇರಿದಂತೆ 150ಕ್ಕೂ ಹೆಚ್ಚು ಪೋಷಕ ಕಲಾವಿದರು ಭಾಗವಹಿಸಿ ಕಾವೇರಿ ಪರ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರು ಖಾಲಿ ಬಿಂದಿಗೆಗಳನ್ನು ಪ್ರದರ್ಶಿಸುವ ಮೂಲಕ ರಾಜ್ಯದಲ್ಲಿ ನೀರಿನ ಕೊರತೆಯ ಗಂಭೀರತೆಯನ್ನು ಸರ್ಕಾರ ಮತ್ತು ಕೇಂದ್ರದ ಗಮನಕ್ಕೆ ತರಲು ಯತ್ನಿಸಿದರು. ಕಾವೇರಿ ವಿಚಾರದಲ್ಲಿ ರಾಜ್ಯದ ಹಕ್ಕುಗಳನ್ನು ಯಾವುದೇ ಕಾರಣಕ್ಕೂ ಕಡೆಗಣಿಸಬಾರದು ಎಂದು ಒತ್ತಾಯಿಸಿ, ರೈತರ ಹಿತಾಸಕ್ತಿಯನ್ನು ರಕ್ಷಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಪ್ರತಿಭಟನೆಯ ವೇಳೆ ಕಲಾವಿದರು ಕಾವೇರಿ ಪರ ಘೋಷಣೆಗಳನ್ನು ಕೂಗಿ ರಾಜ್ಯದ ಹಿತ ಕಾಪಾಡುವಂತೆ ಒತ್ತಾಯಿಸಿದರು. ಯಾವುದೇ ನಿರ್ಧಾರ ಕೈಗೊಳ್ಳುವ ಮೊದಲು ರೈತರ ಹಿತ ಮತ್ತು ಕುಡಿಯುವ ನೀರಿನ ಅಗತ್ಯಕ್ಕೆ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು.

# ಎಐ ಅಪಪ್ರಚಾರ: 15 ಮಂದಿ ವಿರುದ್ಧ ರವಿ ದಾವೆ

www.vikramavahini.com | ಬೆಂಗಳೂರು


ತಮ್ಮ ವಿರುದ್ಧ ಎಐ (ಕೃತಕ ಬುದ್ಧಿಮತ್ತೆ) ತಂತ್ರಜ್ಞಾನ ಬಳಸಿ ಮಾನಹಾನಿಕರ ಚಿತ್ರಗಳು, ವಿಡಿಯೊಗಳು ಹಾಗೂ ಪೋಸ್ಟ್‌ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಲಾಗಿದೆ ಎಂದು ಆರೋಪಿಸಿ ವಿಧಾನ ಪರಿಷತ್ ಸದಸ್ಯ ಡಾ. ರವಿ ಸಿ.ಟಿ. ಅವರು ಬೆಂಗಳೂರಿನ ಪ್ರಧಾನ ನಗರ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ ದಾವೆ ದಾಖಲಿಸಿದ್ದಾರೆ.

ಡಾ. ರವಿ ಅವರ ಪರ ವಕೀಲ ನಿತಿನ್ ಗೌಡ ಮಾತನಾಡಿ, ಇಂಡಿಯನ್ ಯೂತ್ ಕಾಂಗ್ರೆಸ್ ಕರ್ನಾಟಕ ಸೇರಿದಂತೆ 15 ಮಂದಿ ಹಾಗೂ ಕೆಲವು ಸಾಮಾಜಿಕ ಜಾಲತಾಣ ಖಾತೆ ನಿರ್ವಾಹಕರನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ ಎಂದು ತಿಳಿಸಿದರು. ಎಐ ಮೂಲಕ ಸೃಷ್ಟಿಸಿದ ಅಥವಾ ಡಿಜಿಟಲ್ ತಂತ್ರಜ್ಞಾನದಿಂದ ಮಾರ್ಪಡಿಸಿದ ಚಿತ್ರಗಳು, ವಿಡಿಯೊಗಳು ಮತ್ತು ಮೀಮ್ಸ್‌ಗಳನ್ನು ಪ್ರಕಟಿಸಿ ತಮ್ಮ ರಾಜಕೀಯ ವ್ಯಕ್ತಿತ್ವಕ್ಕೆ ಧಕ್ಕೆ ತರಲು ಸಂಚು ರೂಪಿಸಲಾಗಿದೆ ಎಂದು ದಾವೆಯಲ್ಲಿ ಉಲ್ಲೇಖಿಸಲಾಗಿದೆ ಎಂದರು.

ಪ್ರಾಥಮಿಕ ವಿಚಾರಣೆ ನಡೆಸಿದ ನ್ಯಾಯಾಲಯ, ಪ್ರಕರಣದ ಅಂತಿಮ ತೀರ್ಪು ಬರುವವರೆಗೆ ಇದೇ ರೀತಿಯ ಮಾನಹಾನಿಕರ ಪೋಸ್ಟ್‌ಗಳನ್ನು ಪ್ರಕಟಿಸದಂತೆ ಮಧ್ಯಂತರ ತಡೆಯಾಜ್ಞೆ ನೀಡಿದೆ. ಜೊತೆಗೆ ಸಂಬಂಧಿತ ಪೋಸ್ಟ್‌ಗಳನ್ನು ತಕ್ಷಣವೇ ತೆಗೆದುಹಾಕುವಂತೆ ಮೆಟಾಗೆ ಸೂಚನೆ ನೀಡಿದೆ. ಪತ್ರಿಕಾಗೋಷ್ಠಿಯಲ್ಲಿ ವಕೀಲರಾದ ನಿತಿನ್ ಗೌಡ, ಕೃಷ್ಣಕಾಂತ್ ತರಿಕೆರೆ ಹಾಗೂ ಕಾನೂನು ತಂಡದ ಸದಸ್ಯರು ಉಪಸ್ಥಿತರಿದ್ದರು. ದಾವೆಯಲ್ಲಿ, ಪ್ರಕರಣಕ್ಕೆ ಸಂಬಂಧಿಸಿದ ಫೇಸ್‌ಬುಕ್ ಹಾಗೂ ಇನ್‌ಸ್ಟಾಗ್ರಾಂ ಪೋಸ್ಟ್‌ಗಳು, ವಿಡಿಯೊಗಳು, ರೀಲ್ಸ್ ಸೇರಿದಂತೆ ಎಲ್ಲಾ ಡಿಜಿಟಲ್ ವಿಷಯಗಳನ್ನು ತೆರವುಗೊಳಿಸುವಂತೆ ಹಾಗೂ ಪ್ರಕರಣ ಇತ್ಯರ್ಥವಾಗುವವರೆಗೆ ಸಂಬಂಧಿತ ಎಲೆಕ್ಟ್ರಾನಿಕ್ ದಾಖಲೆಗಳನ್ನು ಸಂರಕ್ಷಿಸುವಂತೆ ನ್ಯಾಯಾಲಯಕ್ಕೆ ಮನವಿ ಮಾಡಲಾಗಿದೆ. ಮಾನಹಾನಿಕರ ವಿಷಯಗಳ ಪ್ರಸಾರದಿಂದ ತಮ್ಮ ಸಾರ್ವಜನಿಕ ಗೌರವಕ್ಕೆ ನಿರಂತರ ಹಾನಿಯಾಗುತ್ತಿದೆ ಎಂದು ಡಾ. ರವಿ ಪರ ವಕೀಲರು ತಿಳಿಸಿದ್ದಾರೆ.

# ಮಂಗಳೂರಿಗೆ ಕ್ರೂಸ್ ಸೇವೆಗೆ ಹಸಿರು ನಿಶಾನೆ

www.vikramavahini.com | ಬೆಂಗಳೂರು



**"ಕರ್ನಾಟಕದ ಕರಾವಳಿ ಪ್ರದೇಶವು ಕ್ರೂಸ್ ಪ್ರವಾಸೋದ್ಯಮಕ್ಕೆ ಅಪಾರ ಅವಕಾಶಗಳನ್ನು ಹೊಂದಿದೆ. ರಾಜ್ಯದಲ್ಲಿ ಈ ಕ್ಷೇತ್ರವನ್ನು ಅಭಿವೃದ್ಧಿಪಡಿಸಲು ಸರ್ಕಾರ ಬದ್ಧವಾಗಿದ್ದು, ಉದ್ಯಮದ ಪ್ರಮುಖ ಸಂಸ್ಥೆಗಳೊಂದಿಗೆ ಸಮಾಲೋಚನೆ ನಡೆಸುವ ಮೂಲಕ ಅಗತ್ಯ ಮೂಲಸೌಕರ್ಯ ಹಾಗೂ ಅನುಕೂಲಕರ ಪರಿಸರ ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರಿಂದ ಕರಾವಳಿ ಪ್ರವಾಸೋದ್ಯಮಕ್ಕೆ ಹೊಸ ಉತ್ತೇಜನ ದೊರೆಯಲಿದ್ದು, ಉದ್ಯೋಗ ಮತ್ತು ಹೂಡಿಕೆ ಅವಕಾಶಗಳೂ ಹೆಚ್ಚಲಿವೆ." "ಮಂಗಳೂರಿನಿಂದ ಕ್ರೂಸ್ ಸೇವೆ ಆರಂಭಿಸಲು ವಾಟರ್‌ವೇಸ್ ಲೀಜರ್ ಟೂರಿಸಂ ಸಂಸ್ಥೆಯು ತಾತ್ವಿಕ ಒಪ್ಪಿಗೆ ಸೂಚಿಸಿರುವುದು ಮಹತ್ವದ ಬೆಳವಣಿಗೆಯಾಗಿದೆ. ಮುಂದಿನ ಹಂತದಲ್ಲಿ ಸಂಸ್ಥೆಯ ತಾಂತ್ರಿಕ ತಂಡ ಸ್ಥಳ ಪರಿಶೀಲನೆ ನಡೆಸಲಿದ್ದು, ಅದರ ವರದಿ ಆಧರಿಸಿ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. ಇದೇ ವೇಳೆ, ಅಂತರರಾಷ್ಟ್ರೀಯ ಗುಣಮಟ್ಟದ ಕ್ರೂಸ್ ಟರ್ಮಿನಲ್ ನಿರ್ಮಾಣದ ಸಾಧ್ಯತೆಗಳನ್ನೂ ಇಲಾಖೆ ಪರಿಶೀಲಿಸುತ್ತಿದೆ."**

ರಾಜ್ಯದಲ್ಲಿ ಕ್ರೂಸ್ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಸಚಿವರಾದ ಕೆ.ಜೆ. ಜಾರ್ಜ್ ಅವರ ನಿರ್ದೇಶನದಂತೆ ಪ್ರವಾಸೋದ್ಯಮ ಇಲಾಖೆಯು ದೇಶದ ಪ್ರಮುಖ ಕ್ರೂಸ್ ಸಂಸ್ಥೆಗಳೊಂದಿಗೆ ಸಮಾಲೋಚನೆ ಆರಂಭಿಸಿದೆ. ಈ ಹಿನ್ನೆಲೆಯಲ್ಲಿ ಮುಂಬೈನಲ್ಲಿ ನಡೆದ ಸಭೆಯಲ್ಲಿ ಭಾರತದ ಪ್ರಮುಖ ಕ್ರೂಸ್ ಸಂಸ್ಥೆಯಾದ ವಾಟರ್‌ವೇಸ್ ಲೀಜರ್ ಟೂರಿಸಂ ಲಿಮಿಟೆಡ್ ಮಂಗಳೂರಿನಿಂದ ಕ್ರೂಸ್ ಸೇವೆ ಆರಂಭಿಸುವ ಸಾಧ್ಯತೆಗಳನ್ನು ಪರಿಶೀಲಿಸಲು ತಾತ್ವಿಕ ಒಪ್ಪಿಗೆ ಸೂಚಿಸಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿಗಳಾದ ಡಾ. ರಾಮ್ ಪ್ರಸಾತ್ ಮನೋಹರ್, ಐಎಎಸ್ ತಿಳಿಸಿದ್ದಾರೆ .

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಪ್ರವಾಸೋದ್ಯಮ ಇಲಾಖೆ ಹಿರಿಯ ಅಧಿಕಾರಿಗಳು ಮುಂಬೈನಲ್ಲಿ ಸಂಸ್ಥೆಯ ಅಧ್ಯಕ್ಷ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಜುರ್ಗನ್ ಬೈಲೋಮ್ ಹಾಗೂ ಪೋರ್ಟ್ ಆಪರೇಷನ್ಸ್‌ನ ಅಸೋಸಿಯೇಟ್ ಡೈರೆಕ್ಟರ್ ಶ್ರೀ ಭರತ್ ಆಚಾರ್ಯ ಅವರೊಂದಿಗೆ ಸುಧೀರ್ಘ ಚರ್ಚೆ ನಡೆಸಿದರು. ಮಂಗಳೂರಿನಿಂದ ಕ್ರೂಸ್ ಸೇವೆ ಆರಂಭಿಸಲು ಅಗತ್ಯವಿರುವ ಮೂಲಸೌಕರ್ಯ, ಕಾರ್ಯಾಚರಣೆಯ ಅವಶ್ಯಕತೆಗಳು, ಮಾರುಕಟ್ಟೆ ಅವಕಾಶಗಳು ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಸಭೆಯಲ್ಲಿ ಸಮಗ್ರ ಚರ್ಚೆ ನಡೆಯಿತು.

ಸಭೆಯ ವೇಳೆ ಮಂಗಳೂರು ಕರಾವಳಿ ಪ್ರದೇಶದ ಪ್ರವಾಸೋದ್ಯಮ ಮಾರುಕಟ್ಟೆ, ಪ್ರವಾಸಿಗರ ಬೇಡಿಕೆ ಹಾಗೂ ವಾಣಿಜ್ಯ ಸಾಧ್ಯತೆಗಳ ಕುರಿತು ಸಮಗ್ರ ಅಧ್ಯಯನ ನಡೆಸುವ ಅಗತ್ಯವನ್ನು ಸಂಸ್ಥೆಯ ಪ್ರತಿನಿಧಿಗಳು ತಿಳಿಸಿದರು. ಅಲ್ಲದೆ, ಮಂಗಳೂರು ಕರಾವಳಿ ಪ್ರದೇಶವನ್ನು ದೇಶೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸಲು ವಿಶೇಷ ಪ್ರಚಾರ ಕಾರ್ಯತಂತ್ರ ರೂಪಿಸುವಂತೆ ಸಲಹೆ ನೀಡಿದರು.

ಈ ಹಿನ್ನೆಲೆಯಲ್ಲಿ ಸಂಸ್ಥೆಯ ತಾಂತ್ರಿಕ ತಂಡವು ಮುಂದಿನ ತಿಂಗಳು ಮಂಗಳೂರಿಗೆ ಭೇಟಿ ನೀಡಿ, ಬಂದರು ಮೂಲಸೌಕರ್ಯ, ಪ್ರವಾಸೋದ್ಯಮ ಸಾಮರ್ಥ್ಯ, ಕಾರ್ಯಾಚರಣೆಯ ಸಾಧ್ಯತೆ ಹಾಗೂ ಅಗತ್ಯ ಸೌಲಭ್ಯಗಳ ಕುರಿತು ಸ್ಥಳ ಪರಿಶೀಲನೆ (ರೆಕ್ಕಿ) ನಡೆಸಲಿದೆ.

ಇದೇ ಸಂದರ್ಭದಲ್ಲಿ, ರಾಜ್ಯದಲ್ಲಿ ಕ್ರೂಸ್ ಪ್ರವಾಸೋದ್ಯಮಕ್ಕೆ ಅಗತ್ಯವಾದ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಉದ್ದೇಶದಿಂದ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳ ತಂಡ ಇತ್ತೀಚೆಗೆ ಮುಂಬೈ ಅಂತರರಾಷ್ಟ್ರೀಯ ಕ್ರೂಸ್ ಟರ್ಮಿನಲ್‌ಗೆ ಭೇಟಿ ನೀಡಿ ಅಲ್ಲಿನ ಪ್ರಯಾಣಿಕರ ಸೌಲಭ್ಯಗಳು, ಟರ್ಮಿನಲ್ ನಿರ್ವಹಣೆ ಹಾಗೂ ಕಾರ್ಯಾಚರಣಾ ವ್ಯವಸ್ಥೆಯನ್ನು ಅಧ್ಯಯನ ಮಾಡಿದೆ. ಈ ಅಧ್ಯಯನದ ಆಧಾರದ ಮೇಲೆ ಮಂಗಳೂರಿನಲ್ಲಿ ಅಂತರರಾಷ್ಟ್ರೀಯ ಗುಣಮಟ್ಟದ ಕ್ರೂಸ್ ಟರ್ಮಿನಲ್ ಅಭಿವೃದ್ಧಿಪಡಿಸುವ ಸಾಧ್ಯತೆ ಕುರಿತು ಪ್ರಾಥಮಿಕ ಕಾರ್ಯಸಾಧ್ಯತಾ ಅಧ್ಯಯನ (ಈಜಚಿಟಿಟಿಜಿಇಞಥಿ ಖಣಣಜಥಿ) ಕೈಗೊಳ್ಳುವಂತೆ ಕಾರ್ಯದರ್ಶಿಗಳಾದ ಡಾ ರಾಮ್ ಪ್ರಸಾತ್ ಮನೋಹರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

# ಕಾವೇರಿ ನೀರು ಬಿಡುಗಡೆ ವಿರೋಧಿಸಿ ಆ.13ಕ್ಕೆ ಕರ್ನಾಟಕ ಬಂದ್ ಕರೆ

www.vikramavahini.com | ಬೆಂಗಳೂರು

ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ವಿರೋಧಿಸಿ ಕನ್ನಡಪರ ಸಂಘಟನೆಗಳು, ರೈತ ಸಂಘಟನೆಗಳು ಹಾಗೂ ವಿವಿಧ ಅಸಂಘಟಿತ ಕಾರ್ಮಿಕ ಸಂಘಟನೆಗಳು ಆಗಸ್ಟ್ 13ರಂದು ಬೆಳಿಗ್ಗೆ 6ರಿಂದ ಸಂಜೆ 6ರವರೆಗೆ ಅಖಂಡ ಕರ್ನಾಟಕ ಬಂದ್‌ಗೆ ಕರೆ ನೀಡಿವೆ.

ಕನ್ನಡಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯ ಸರ್ಕಾರ ತುರ್ತು ಸರ್ವಪಕ್ಷ ಸಭೆ ಕರೆದು ರಾಜ್ಯದ ಹಿತ ಕಾಪಾಡುವ ದಿಟ್ಟ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಳೆ ಕೊರತೆ, ಬರ ಹಾಗೂ ಜಲಾಶಯಗಳಲ್ಲಿ ನೀರಿನ ಅಭಾವ ಇರುವ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಹರಿಸಬಾರದು ಎಂದು ಆಗ್ರಹಿಸಿದರು.

ಬಂದ್‌ಗೆ ಹೋಟೆಲ್ ಮಾಲೀಕರು, ಸಾರಿಗೆ ಸಂಘಟನೆಗಳು, ಚಿತ್ರರಂಗ ಸೇರಿದಂತೆ ಎಲ್ಲ ವಲಯಗಳೂ ಸಕ್ರಿಯ ಬೆಂಬಲ ನೀಡುವಂತೆ ಮನವಿ ಮಾಡಿದರು.

ಇದೇ ವೇಳೆ, ತಮಿಳುನಾಡಿಗೆ ನೀರು ಬಿಡುಗಡೆ ವಿರೋಧಿಸಿ ಬಿಜೆಪಿ ನಾಯಕರು ಮತ್ತು ವಿವಿಧ ಕನ್ನಡಪರ ಸಂಘಟನೆಗಳು ಕೆಆರ್‌ಎಸ್ ಬಳಿ ಪ್ರತಿಭಟನೆ ನಡೆಸಿ, ರಾಜ್ಯದ ರೈತರ ಹಿತ ಕಾಪಾಡುವಂತೆ ಸರ್ಕಾರವನ್ನು ಒತ್ತಾಯಿಸಿದರು.

# 70 ಸಾವಿರ ಸಕ್ರಮ

## ನೇಮಕಾತಿಗೆ ತಜ್ಞರ ಸಮಿತಿ

1ನೇ ಪುಟದಿಂದ

ದೇಶಕ್ಕೆ ವಿದ್ಯಾರ್ಥಿಗಳ ಸಂದೇಶ ಈಗಾಗಲೇ ಸ್ಪಷ್ಟವಾಗಿದೆ. ಇತರ ರಾಜ್ಯಗಳಿಗೆ ಹೋಲಿಸಿದರೆ ತಾಂತ್ರಿಕತೆಯಲ್ಲಿ ಕರ್ನಾಟಕಕ್ಕೆ ದೊಡ್ಡ ಇತಿಹಾಸವಿದೆ. ತಾಂತ್ರಿಕತೆಯಲ್ಲಿ ನಾವು ತುಂಬಾ ಮುಂದೆ ಇದ್ದೇವೆ. ಇದನ್ನು ಸಮರ್ಪಕವಾಗಿ ಬಳಸಿಕೊಂಡು ನೇಮಕಾತಿಯನ್ನು ಅತ್ಯಂತ ವೃತ್ತಿಪರವಾಗಿ ನಡೆಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಅಧಿಕಾರಿಗಳಿಗೆ ಪಾಠ ಮಾಡಿದರು.

ಮುಂದಿನ ಆರು ತಿಂಗಳಲ್ಲಿ 36,773 ಹುದ್ದೆಗಳನ್ನು ತುಂಬಲು ಕೆಪಿಎಸ್ಸಿ ಮತ್ತು ಕೆಇಎ ಈಗಾಗಲೇ ವೇಳಾಪಟ್ಟಿಯನ್ನು ಹೊರಡಿಸಿದ್ದು, ಸುಮಾರು 35 ಲಕ್ಷ ಅಭ್ಯರ್ಥಿಗಳು ಪರೀಕ್ಷೆ ಬರೆಯುವ ನಿರೀಕ್ಷೆಯಿದೆ. ಪರೀಕ್ಷೆ ಪ್ರಕ್ರಿಯೆಯಲ್ಲಿ ಯಾವೆಲ್ಲಾ ಕ್ರಮಗಳನ್ನು ಅನುಸರಿಸಬೇಕು.

**ಸಭೆಯಲ್ಲಿ ಅಧಿಕಾರಿಗಳಿಗೆ ಡಿಕೆಶಿ ನೀಡಿದ ಸೂಚನೆಗಳೇನು?**

- ನೇಮಕಾತಿ ಪ್ರಕ್ರಿಯೆಯನ್ನು ಸಂಪೂರ್ಣ ಪಾರದರ್ಶಕವಾಗಿ ನಡೆಸಬೇಕು
- ಯಾವುದೇ ಪರೀಕ್ಷಾ ಅಕ್ರಮಗಳಿಗೆ ಅವಕಾಶ ಇರಬಾರದು
- ದೇಶಕ್ಕೆ ಮಾದರಿಯಾಗಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಬೇಕು
- ಪರೀಕ್ಷೆ ಅಕ್ರಮ ನಡೆದರೆ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳೇ ಜವಾಬ್ದಾರಿ
- ಎಲ್ಲಾ ಕೋಚಿಂಗ್ ಸೆಂಟರ್‌ಗಳ ಮೇಲೆ ಕಣ್ಣಾವಲು ಇಡಬೇಕು.
- ಪರೀಕ್ಷೆ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ಕೈಗೊಳ್ಳಲು ಕೈಗೊಂಡಿರುವ ಕ್ರಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ಒದಗಿಸಬೇಕು.
- ಪರೀಕ್ಷಾ ಪ್ರಕ್ರಿಯೆಯನ್ನು ಇನ್ನಷ್ಟು ಸುಧಾರಿಸಲು ಯುಪಿಎಸ್ಸಿಯಲ್ಲಿ ಅನುಸರಿಸುವ ಉತ್ತಮ ಅಂಶಗಳನ್ನು ಇಲ್ಲಿಯೂ ಅಳವಡಿಸಿಕೊಳ್ಳಬೇಕು.
- ಜಿಲ್ಲಾ ಮಟ್ಟದಲ್ಲಿ ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸುವುದು ಜಿಲ್ಲಾಮಟ್ಟದ ಹಿರಿಯ ಅಧಿಕಾರಿಗಳ ಜವಾಬ್ದಾರಿ.
- ಜಿಲ್ಲಾಧಿಕಾರಿ, ಎಸ್ಪಿ ಮತ್ತು ಶಿಕ್ಷಣ ಇಲಾಖೆ ಅಧಿಕಾರಿಗಳು ಸಂಪೂರ್ಣ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು.
- ಪ್ರತಿಯೊಬ್ಬರಿಗೆ ಜವಾಬ್ದಾರಿಯನ್ನು ನಿಗದಿಪಡಿಸಲಾಗಿದ್ದು, ಪ್ರತಿಯೊಬ್ಬರೂ ಅವರ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು.

# 'ಕಾಮಗಾರಿ ನಡೆಸದೆ ನಕಲಿ ಬಿಲ್ ಮಾಡಿ ಹಣ ಪಡೆದರೆ ಕಠಿಣ ಕ್ರಮ'

www.vikramavahini.com | ಬೆಂಗಳೂರು

ಮಳೆ ಕೊರತೆಯಿಂದ ಯಾವುದೇ ಗ್ರಾಮೀಣ ಜನತೆ ಗುಳೆ ಹೋಗದಂತೆ ತಡೆಯಲು, ಇರುವ ಸ್ಥಳದಲ್ಲೇ ವಿಬಿಜಿ ರಾಮ್ ಜಿಯಡಿ ಉದ್ಯೋಗ ನೀಡಲು ಕ್ರಮ ವಹಿಸಿ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಜಿ.ಪಂ. ಸಿಇಓಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಮುಖ್ಯ ಕಾರ್ಯದರ್ಶಿ, ಇಲಾಖೆಯ ಕಾರ್ಯದರ್ಶಿ ಮತ್ತು ಎಲ್ಲ ಜಿಲ್ಲೆಗಳ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಸಿಇಓಗಳ ಸಭೆ ನಡೆಸಿದ ಅವರು, ಜುಲೈ 1ರಿಂದ ಮಾರ್ಚ್ 31ರವರೆಗೆ 9 ತಿಂಗಳ ಅವಧಿಗೆ ಕೇಂದ್ರ ಸರ್ಕಾರ 5709 ಕೋಟಿ ರೂ. ಹಂಚಿಕೆ ಮಾಡಿದೆ. ರಾಜ್ಯ ಸರ್ಕಾರ 3806 ಕೋಟಿ ರೂ. ಭರಿಸುತ್ತಿದೆ. ಅಂದರೆ ಒಟ್ಟು 9515 ಕೋಟಿ ರೂ. ನಮಗೆ 9 ತಿಂಗಳಿಗೆ ಲಭ್ಯವಿದೆ.



ಈ 9 ತಿಂಗಳಲ್ಲಿ ವಿಬಿಜಿ ರಾಮ್ ಜಿ ಅಡಿ ಪ್ರತಿ ತಿಂಗಳೂ 5 ಲಕ್ಷ ಜನರಿಗೆ ಉದ್ಯೋಗ ನೀಡಲು ಅವಕಾಶವಿದೆ. ಆದರೆ ಜುಲೈ ತಿಂಗಳಲ್ಲಿ ಪ್ರಗತಿ ಆಶಾದಾಯಕವಾಗಿಲ್ಲ. ಆಗಸ್ಟ್ ನಿಂದ ಸಮರೋಪಾದಿಯಲ್ಲಿ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿ ಕೈಗೊಂಡು, ಶಾಶ್ವತ ಆಸ್ತಿಯನ್ನು ಸೃಷ್ಟಿಸಬೇಕು, ಗ್ರಾಮೀಣ ಭೂ ರಹಿತ ಕೂಲಿ ಕಾರ್ಮಿಕರಿಗೆ, ಬಡವರಿಗೆ ಉದ್ಯೋಗ ನೀಡಿ ಗುಳೆ ತಡೆಯಬೇಕು ಎಂದು ಈಶ್ವರ ಖಂಡ್ರೆ ನಿರ್ದೇಶನ ನೀಡಿದರು.

ಉದ್ಯೋಗ ಕೇಳಿದರೂ ಪಂಚಾಯತಿಗಳಲ್ಲಿ ಕೆಲಸ ಕೊಡುತ್ತಿಲ್ಲ ಎಂಬ ಆರೋಪ ಬಾರದಂತೆ ಸಿಇಓಗಳು ಕ್ರಮ ವಹಿಸಬೇಕು, ಕೆಲಸ ಮಾಡದೆ ನಕಲಿ ಬಿಲ್ ನೀಡಿ ಹಣ ಪಡೆದರೆ, ಕಳಪೆ ಕಾಮಗಾರಿ ಮಾಡಿದರೆ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮ ಕೈಗೊಳ್ಳಬೇಕು, ತಾಲೂಕು ಕಾರ್ಯನಿರ್ವಹಣಾಧಿಕಾರಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಈ ಬಗ್ಗೆ ಸ್ಪಷ್ಟ ನಿರ್ದೇಶನ ನೀಡಬೇಕು ಎಂದು ಸೂಚಿಸಿದರು.

ವಿಬಿಜಿ ರಾಮ್ ಜಿ ಅಡಿಯಲ್ಲಿ ಶಿಥಿಲವಾಗಿರುವ ಶಾಲಾ ಕಟ್ಟಡಗಳ ದುರಸ್ತಿಗೆ, ಹೊಸ ಕೊಠಡಿಗಳು ಹಾಗೂ ಆವರಣ ಗೋಡೆ ನಿರ್ಮಾಣಕ್ಕೆ ಅವಕಾಶವಿದ್ದು, ಶಿಕ್ಷಣ ಇಲಾಖೆಯೊಂದಿಗೆ ಸಭೆ ನಡೆಸಿ ಕಾಮಗಾರಿ ಕೈಗೊಳ್ಳುವಂತೆ ಸೂಚಿಸಿದರು.

ಉದ್ಯೋಗದ ಕಾರ್ಡ್ ರದ್ದಾಗಿರುವ ಅರ್ಹರಿಗೆ ಉದ್ಯೋಗದ ಕಾರ್ಡ್ ನೀಡಲು ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ವಿಶೇಷ ಚೇತನರಿಗೆ, ಮಹಿಳಾ ನೇತೃತ್ವದಲ್ಲಿ ಮನೆ ನಿರ್ವಹಣೆ ಮಾಡುತ್ತಿರುವವರಿಗೆ, ಪರಿಶಿಷ್ಟ ಜಾತಿ, ಪಂಗಡ ಹಾಗೂ ಬಡವರಿಗೆ ಆದ್ಯತೆಯ ಮೇಲೆ ಉದ್ಯೋಗ ನೀಡಲು ಸೂಚಿಸಿದ ಈಶ್ವರ ಖಂಡ್ರೆ, ಉದ್ಯೋಗ ನೀಡಿಕೆ ಮತ್ತು ಆಸ್ತಿ ಸೃಜನೆಯಲ್ಲಿ ಹಿಂದೆ ಬಿದ್ದಿರುವ, ವಿವಿಧ ಜಿಲ್ಲೆಗಳ ಸಿಇಓಗಳಿಗೆ ಎಚ್ಚರಿಕೆ ನೀಡಿ, ಕೂಡಲೇ ಗ್ರಾಮ ಸಭೆ ನಡೆಸಲು, ಕಾಮಗಾರಿಗೆ ಅನುಮೋದನೆ ನೀಡಲು ತುರ್ತು ಕ್ರಮ ವಹಿಸಿ, ಹೆಚ್ಚು ಶ್ರಮವಹಿಸಿ ಫಲಿತಾಂಶ ಸಕಾರಾತ್ಮಕವಾಗಿರಬೇಕು ಎಂದರು.

ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮಧ್ಯ ಪ್ರವೇಶಿಸಿ, ಮೀನುಗಾರಿಕೆ ಶೆಡ್, ಕೊಟ್ಟಿಗೆ, ಕುರಿಗಳ ಶೆಡ್ ಇತ್ಯಾದಿ ನಿರ್ಮಾಣಕ್ಕೆ ಕೂಡ ಅವಕಾಶವಿದ್ದು, ಪಶುಸಂಗೋಪನಾ ಇಲಾಖೆಯ ಸಹಯೋಗದಲ್ಲಿ ಈ ಯೋಜನೆಗಳನ್ನು ಕಾರ್ಯಗತಗೊಳಿಸಬಹುದು. ಅದೇ ರೀತಿ ರಾಜ್ಯದಲ್ಲಿ ಬರ ಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ಕರ್ನಾಟಕ ಹಾಲು ಉತ್ಪಾದಕರ ಒಕ್ಕೂಟದ ಸಹಯೋಗದಲ್ಲಿ ಮೇವು ಬೆಳೆಸಲು ಕ್ರಮ ವಹಿಸಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ, ಆಯುಕ್ತರಾದ ದಿವ್ಯ ಪ್ರಭು ಹಾಗೂ ಜಿಲ್ಲಾ ಕಾರ್ಯದರ್ಶಿಗಳು, ಸಿಇಓಗಳು ಪಾಲ್ಗೊಂಡಿದ್ದರು.

# ರೇಷನ್ ಅಂಗಡಿಯಲ್ಲಿ ಸಿನಿಮಾ ಟಿಕೆಟ್ ಮಾರಾಟಕ್ಕೆ ಬ್ರೇಕ್

1ನೇ ಪುಟದಿಂದ

ಪ್ರತಿಯೊಂದು ಪಡಿತರ ಅಂಗಡಿಯಲ್ಲಿ 50 ರಿಂದ100 ಟಿಕೆಟ್ ತೆಗೆದುಕೊಂಡಿದ್ದರು. 150 ರೂಪಾಯಿ ದರಕ್ಕೆ ಗ್ರಾಹಕರಿಗೆ ಮಾರಾಟ ಮಾಡಿದ್ದರು. ಸುದ್ದಿ ಬಂದ ನಂತರ ಪಡಿತರ ಅಂಗಡಿಯ ಮಾಲೀಕರಿಗೆ ನೋಟೀಸ್ ನೀಡಲಾಗಿದೆ. ಗ್ರಾಹಕರಿಗೆ ಸಿನಿಮಾ ಟಿಕೆಟ್ ಮಾರಾಟ ಮಾಡಬಾರದು ಅಂತಾ ಹೇಳಿದ್ದೇವೆ.

ರಾಜ್ಯ ಸರ್ಕಾರದ ಕನಸಿನ ಕೂಸಾದ ಅನ್ನಭಾಗ್ಯ ಯೋಜನೆಯ ಪಡಿತರ ವಿತರಣೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಜಾಗೃತಿ ಗೊಳಿಸುವ ಸಂಬಂಧ 'ಸರ್ಕಾರಿ ನ್ಯಾಯಬೆಲೆ ಅಂಗಡಿ' ಎಂಬ ಚಲನಚಿತ್ರವನ್ನು ಮೊದಲ ಬಾರಿಗೆ ಕರ್ನಾಟಕ ರಾಜ್ಯದ ಎಲ್ಲಾ ನ್ಯಾಯಬೆಲೆ ಅಂಗಡಿಯ ಮಾಲೀಕರು ಹಾಗೂ ಕುಟುಂಬ ವರ್ಗದವರಿಗೆ ಹಾಗೂ ರಾಜ್ಯದ ಕಾರ್ಡುದಾರರಿಗೆ ಪ್ರದರ್ಶಿಸುವ ಸಲುವಾಗಿ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆ, ತಾಲೂಕುಗಳಲ್ಲಿ ಚಲನಚಿತ್ರದ ಪ್ರದರ್ಶನಕ್ಕೆ ಅನುವು ಮಾಡಿಕೊಡಲು ಕೋರಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರ ಇಲಾಖೆ ಆಯುಕ್ತರು ಅದಾಗಲೇ ಆದೇಶಿಸಿತ್ತು. ಪಡಿತರ ಅಂಗಡಿಗಳಲ್ಲಿ ಸಿನಿಮಾ ಟಿಕೆಟ್ ಮಾರಾಟ ಸಂಬಂಧ ಆಹಾರ ಇಲಾಖೆಯ ನಿರ್ಧಾರಕ್ಕೆ ವಿರೋಧ ವ್ಯಕ್ತವಾಗಿತ್ತು.

# ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನಕ್ಕೆ ಕೈಜೋಡಿಸಿದ ಜಲಮಂಡಳಿ

www.vikramavahini.com | ಬೆಂಗಳೂರು

ಫ್ರೀಡಮ್ ಫ್ರಂ ವೇಸ್ಟ್ ಅಭಿಯಾನಕ್ಕೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕೈಜೋಡಿಸಿದೆ. ಜಲಮಂಡಳಿ ವತಿಯಿಂದ ಕೈಗೊಳ್ಳಲಾಗುತ್ತಿರುವ ವಿವಿಧ ಕಾಮಗಾರಿಗಳ ಬಳಿಕ ರಸ್ತೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಉಳಿಯುವ ನಿರ್ಮಾಣ ತ್ಯಾಜ್ಯ ಮತ್ತು ಅವಶೇಷಗಳನ್ನು ತ್ವರಿತವಾಗಿ ತೆರವುಗೊಳಿಸುವ ವಿಶೇಷ ಕಾರ್ಯಾಚರಣೆ ಕೈಗೊಳ್ಳುವಂತೆ ಬೆಂಗಳೂರು ಜಲಮಂಡಳಿ ಅಧ್ಯಕ್ಷೆ ಡಾ. ಎನ್. ಮಂಜುಳ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

**'ಫ್ರೀಡಮ್ ಫ್ರಂ ವೇಸ್ಟ್ ' ಅಭಿಯಾನದಡಿ ಜಲಮಂಡಳಿಯ ಕ್ರಮಗಳು**

1) ಜಲಮಂಡಳಿ ಕಾಮಗಾರಿಗಳ ಬಳಿಕ ಉಳಿಯುವ ನಿರ್ಮಾಣ ತ್ಯಾಜ್ಯ ಮತ್ತು ಅವಶೇಷಗಳ ತೆರವು
2) ಕಾಮಗಾರಿ ಪೂರ್ಣಗೊಂಡ ತಕ್ಷಣ ಸ್ಥಳವನ್ನು ಸ್ವಚ್ಛಗೊಳಿಸುವುದು ಕಡ್ಡಾಯ
3) ಮಳೆನೀರು ಹರಿವಿಗೆ ಅಡ್ಡಿಯಾಗುವ ನಿರ್ಮಾಣ ಅವಶೇಷಗಳ ತೆರವಿಗೆ ವಿಶೇಷ ನಿಗಾ
4) ಕ್ಷೇತ್ರಮಟ್ಟದ ಅಧಿಕಾರಿಗಳಿಂದ ನಿರಂತರ ಪರಿಶೀಲನೆ ಹಾಗೂ ಮೇಲ್ವಿಚಾರಣೆ
5) ಗುತ್ತಿಗೆದಾರರ ಜವಾಬ್ದಾರಿ ನಿಗದಿ ಮತ್ತು ಕಾಮಗಾರಿ ನಂತರದ ಸ್ವಚ್ಛತೆಗೆ ಆದ್ಯತೆ
6) ಜಿಬಿಎ ಮತ್ತು ಐದು ಮಹಾನಗರಪಾಲಿಕೆಗಳಿಗೆ ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯದ ಮೂಲಕ ಅಭಿಯಾನದ ಪರಿಣಾಮಕಾರಿ ಅನುಷ್ಠಾನ

ಈ ಕುರಿತು ಜಲಮಂಡಳಿ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಡಾ. ಮಂಜುಳ ಅವರು, ಜಲಮಂಡಳಿ ಕೈಗೊಳ್ಳುವ ಪ್ರತಿಯೊಂದು ಕಾಮಗಾರಿಯೂ ಸಾರ್ವಜನಿಕರಿಗೆ ಉತ್ತಮ ಮೂಲಸೌಕರ್ಯ ಒದಗಿಸುವುದಾಗಿದೆ. ಇದರ ಜೊತೆಯಲ್ಲೇ, ಕಾಮಗಾರಿ ಪೂರ್ಣಗೊಂಡ ಬಳಿಕ ಸ್ಥಳವನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ ಸಾರ್ವಜನಿಕ ಬಳಕೆಗೆ ಯೋಗ್ಯ ಸ್ಥಿತಿಯಲ್ಲಿ ಹಸ್ತಾಂತರಿಸುವ ಜವಾಬ್ದಾರಿಯೂ ಅಷ್ಟೇ ಮಹತ್ವದ್ದಾಗಿದೆ ಎಂದು ಹೇಳಿದರು.

ಕುಡಿಯುವ ನೀರಿನ ಪೈಪ್‌ಲೈನ್, ಒಳಚರಂಡಿ ಜಾಲ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳ ಸಂದರ್ಭದಲ್ಲಿ ಉಂಟಾಗುವ ಮಣ್ಣು, ಜಲ್ಲಿ, ಕಾಂಕ್ರೀಟ್, ಕಲ್ಲು ಸೇರಿದಂತೆ ನಿರ್ಮಾಣ ತ್ಯಾಜ್ಯ ಮತ್ತು ಅವಶೇಷಗಳು ರಸ್ತೆ, ಪಾದಚಾರಿ ಮಾರ್ಗ, ಚರಂಡಿ ಅಥವಾ ರಾಜಕಾಲುವೆಗಳ ಬಳಿ ಯಾವುದೇ ಕಾರಣಕ್ಕೂ ಉಳಿಯಬಾರದು. ಕಾಮಗಾರಿ ಪೂರ್ಣಗೊಂಡ ತಕ್ಷಣ ಅವುಗಳನ್ನು ತೆರವುಗೊಳಿಸಿ ಸ್ಥಳವನ್ನು ಮೂಲ ಸ್ಥಿತಿಗೆ ತರಲು ಕಟ್ಟುನಿಟ್ಟಾದ ಕ್ರಮಗಳನ್ನು ಕೈಗೊಳ್ಳಬೇಕು. ಕ್ಷೇತ್ರಮಟ್ಟದ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಎಲ್ಲ ಕಾಮಗಾರಿ ಸ್ಥಳಗಳನ್ನು ನಿಯಮಿತವಾಗಿ ಪರಿಶೀಲಿಸಿ, ನಿರ್ಮಾಣ ತ್ಯಾಜ್ಯ ತೆರವುಗೊಳಿಸಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅಧ್ಯಕ್ಷರು ಸೂಚನೆ ನೀಡಿದರು.

ಗುತ್ತಿಗೆದಾರರು ಕಾಮಗಾರಿ ಸ್ಥಳವನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ, ರಸ್ತೆ ಮತ್ತು ಸಾರ್ವಜನಿಕ ಸ್ಥಳಗಳನ್ನು ಪುನಃಸ್ಥಾಪಿಸಿದ ಬಳಿಕವೇ ಕಾಮಗಾರಿ ಪೂರ್ಣಗೊಂಡಿರುವುದಾಗಿ ಪರಿಗಣಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು.

ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಬಿಬಿಎಂಪಿ ಸೇರಿದಂತೆ ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸುವಂತೆ ಹಾಗೂ ಕೈಗೊಂಡಿರುವ ಕ್ರಮಗಳ ಕುರಿತು ನಿಯಮಿತವಾಗಿ ಪ್ರಗತಿ ವರದಿ ಸಲ್ಲಿಸುವಂತೆ ಎಲ್ಲಾ ಮುಖ್ಯ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಜಲಮಂಡಳಿ ಅಧ್ಯಕ್ಷೆ ಡಾ ಮಂಜುಳ ನಿರ್ದೇಶನ ನೀಡಿದರು.

# ಶಾಲಾ-ಕಾಲೇಜು ಆವರಣಗಳಲ್ಲಿ ಜಂಕ್ ಫುಡ್ ಮಾರಾಟಕ್ಕೆ ನಿರ್ಬಂಧ: ಯು.ಟಿ.ಖಾದರ್

www.vikramavahini.com | ಬೆಂಗಳೂರು

ವಿದ್ಯಾರ್ಥಿಗಳ ದೈಹಿಕ ಮತ್ತು ಮಾನಸಿಕ ಆರೋಗ್ಯದ ಹಿತದೃಷ್ಟಿಯಿಂದ ಶಾಲೆ-ಕಾಲೇಜುಗಳ 50 ಮೀಟರ್ ವ್ಯಾಪ್ತಿಯೊಳಗೆ ಯಾವುದೇ ರೀತಿಯ ಸಂಸ್ಕರಿಸದ, ಗುಣಮಟ್ಟವಲ್ಲದ, ಕೆಮಿಕಲ್ ಯುಕ್ತ ಹಾಗೂ ಆರೋಗ್ಯಕ್ಕೆ ಮಾರಕವಾಗಿರುವ ಯಾವುದೇ ರೀತಿಯ ಝಂಕ್ ಫುಡ್ ಗಳ ಮಾರಾಟವನ್ನು ನಿಷೇಧಿಸಿ ಸರ್ಕಾರ ಆದೇಶಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ಯು.ಟಿ.ಖಾದರ್ ತಿಳಿಸಿದರು.

ಆರೋಗ್ಯ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸಂಜೆ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪೋಷಕರು ಮತ್ತು ನಾಗಕರು ಈ ಕುರಿತು ದೂರುಗಳನ್ನು ನೀಡಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ದಿಟ್ಟ ಕ್ರಮಗಳನ್ನು ಕೈಗೊಂಡಿದೆ. ಈಗಾಗಲೇ 134 ಶಾಲೆ, ಕಾಲೇಜುಗಳ 50 ಮೀಟರ್ ವ್ಯಾಪ್ತಿಯೊಳಗೆ ಹೈ ಫ್ಯಾಟ್, ಹೈ ಶುಗರ್ ಮತ್ತು ಹೈ ಸಾಲ್ಟ್ ಯುಕ್ತ ಆಹಾರ ಉತ್ಪನ್ನಗಳ ಮಾರಾಟದ ಗುಣಮಟ್ಟ ಪರಿಶೀಲಿಸಲಾಗಿದೆ. ಮುಂದಿನ ದಿನಗಳಲ್ಲಿ ಮಾರಾಟಗಾರರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವುದಾಗಿ ಹೇಳಿದರು.



ವಿದ್ಯಾರ್ಥಿಗಳಿಗೆ ಸುರಕ್ಷಿತ, ಗುಣಮಟ್ಟಯುತ ಹಾಗೂ ಆರೋಗ್ಯಕರ ಆಹಾರ ಲಭ್ಯವಾಗುವಂತೆ ಮಾಡಲು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ರಾಜ್ಯಾದ್ಯಂತ ಕಠಿಣ ಕ್ರಮಗಳನ್ನು ಕೈಗೊಂಡಿದೆ. ಶಾಲೆಗಳು ಮತ್ತು ಕಾಲೇಜುಗಳ ಆವರಣ ಹಾಗೂ ಸುತ್ತಮುತ್ತಲಿನ ಆಹಾರ ವ್ಯಾಪಾರ ಕೇಂದ್ರಗಳಲ್ಲಿ ವಿಶೇಷ ಪರಿಶೀಲನಾ ಅಭಿಯಾನ ನಡೆಸಲಾಗಿದ್ದು, ಆಹಾರ ಪದಾರ್ಥಗಳ ಗುಣಮಟ್ಟ, ಸ್ವಚ್ಛತೆ, ನೈರ್ಮಲ್ಯ, ಲೇಬಲಿಂಗ್, ಅವಧಿ ಮೀರಿದ ಉತ್ಪನ್ನಗಳ ಮಾರಾಟ ಹಾಗೂ ಪರವಾನಗಿ, ನೋಂದಣಿ ದಾಖಲೆಗಳ ಪರಿಶೀಲನೆ ಮಾಡಲಾಗಿದೆ.

ಪರಿಶೀಲನೆಯ ವೇಳೆ ಸಂಶಯಾಸ್ಪದವಾಗಿ ಕಂಡುಬಂದ 53 ಆಹಾರ ಮಾದರಿಗಳನ್ನು ಸಂಗ್ರಹಿಸಿ, ವಿಶ್ಲೇಷಣೆಗಾಗಿ ಬೆಂಗಳೂರು ರಾಜ್ಯ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ವರದಿಗಳ ಆಧಾರದ ಮೇಲೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ಹಾಗೂ ನಿಯಮಗಳು 2011ರ ಅನ್ವಯ ಸಂಬಂಧಿತ ವ್ಯಾಪಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ. ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ಮಾರ್ಗಸೂಚಿಗಳಂತೆ ಜುಲೈ 21 ರಿಂದ ಶಾಲೆ ಮತ್ತು ಕಾಲೇಜುಗಳ ಆವರಣ ಹಾಗೂ 50 ಮೀಟರ್ ವ್ಯಾಪ್ತಿಯಲ್ಲಿ ಅನಾರೋಗ್ಯಕರ ಆಹಾರ ಮಾರಾಟವನ್ನು ನಿರುತ್ಸಾಹಗೊಳಿಸಿ, ಆರೋಗ್ಯಕರ ಆಹಾರ ಪದ್ಧತಿಯನ್ನು ಉತ್ತೇಜಿಸಲು ಸಲಹಾ ಪ್ರಕಟಣೆ ಹೊರಡಿಸಲಾಗಿದೆ.

ಈ ಕ್ರಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಶಾಲಾ-ಕಾಲೇಜು ಆಡಳಿತ ಮಂಡಳಿ, ಆಹಾರ ವ್ಯಾಪಾರಿಗಳು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಸೂಚಿಸಲಾಗಿದೆ. ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯಿಂದ ಇಂತಹ ಪರಿಶೀಲನಾ ಅಭಿಯಾನಗಳನ್ನು ಮುಂದುವರೆಸುವುದಾಗಿ ತಿಳಿಸಿದರು.

ಕಾವೇರಿ ವಿಚಾರ:

ನಾವು ರಾಜ್ಯದ ಜನರೊಂದಿಗೆ ಮತ್ತು ರೈತರೊಂದಿಗೆ ಇದ್ದೇವೆ. ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಮತ್ತು ಎಲ್ಲ ಸಚಿವರು ರಾಜ್ಯದ ಜನರೊಂದಿಗೆ ಇದ್ದೇವೆ. ಕಾವೇರಿ ನೀರಿನ ವಿಚಾರವಾಗಿ ನ್ಯಾಯಾಲಯದ ಆದೇಶದಂತೆ ನಡೆದುಕೊಳ್ಳುತ್ತೇವೆ. ಆದರೆ, ನಮಗೆ ರಾಜ್ಯ ಮತ್ತು ರಾಜ್ಯದ ಜನತೆಯ ಹಿತ ಮುಖ್ಯ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಾದ ಗುರುದತ್ತ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಆಯುಕ್ತರಾದ ಶ್ರೀನಿವಾಸ, ಇಲಾಖೆಯ ಅಧಿಕಾರಿಗಳಾದ ಶಾಸ್ತ್ರಿ, ಕರ್ಜಗಿ ಇನ್ನಿತರರು ಸುದ್ದಿಗೋಷ್ಠಿಯಲ್ಲಿದ್ದರು.

## ಮೋದಿ ಸ್ವಾಗತಕ್ಕೆ 13 ಸಾವಿರ ವಿದ್ಯಾರ್ಥಿಗಳ ಧಿಂಸಾ ನೃತ್ಯ

www.vikramavahini.com | ವಿಜಯನಗರ

ಆಂಧ್ರಪ್ರದೇಶದ ವಿಜಯನಗರ ಜಿಲ್ಲೆಯ ಭೋಗಾಪುರಂನಲ್ಲಿ ನಿರ್ಮಿಸಲಾಗಿರುವ 'ಅಲ್ಲೂರಿ ಸೀತಾರಾಮ ರಾಜು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ'ದ ಉದ್ಘಾಟನೆಗಾಗಿ ಆಗಸ್ಟ್ 1ರಂದು ಆಗಮಿಸಲಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅತ್ಯಂತ ಭವ್ಯ ಸ್ವಾಗತ ಕೋರಲು ಆಂಧ್ರಪ್ರದೇಶ ರಾಜ್ಯ ಸರ್ಕಾರವು ಸಮಗ್ರ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ.

ಉದ್ಘಾಟನಾ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ನಾಳೆ ಸುಮಾರು 13,000 ಮಕ್ಕಳು ಸಾಂಪ್ರದಾಯಿಕ ಬುಡಕಟ್ಟು ಜನಪದ ನೃತ್ಯವಾದ ಧಿಂಸಾವನ್ನು ಪ್ರದರ್ಶಿಸಲಿದ್ದಾರೆ. ಇದಕ್ಕಾಗಿ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ವಿದ್ಯಾರ್ಥಿಗಳು ವಿಶೇಷ ರಿಹರ್ಸಲ್ ನಡೆಸಿದರು.

ಉತ್ತರ ಆಂಧ್ರದ ಬುಡಕಟ್ಟು ಪರಂಪರೆ ಮತ್ತು ಸಾಂಸ್ಕೃತಿಕ ವೈಭವವನ್ನು ಇಡೀ ದೇಶಕ್ಕೆ ಸಾರುವ ಉದ್ದೇಶದಿಂದ ಈ ಬೃಹತ್ 'ಧಿಂಸಾ' ಸಮೂಹ ನೃತ್ಯವನ್ನು ಆಯೋಜಿಸಲಾಗಿದೆ.

ಪ್ರಧಾನಿ ಮೋದಿ ನಾಳೆ ಭೋಗಾಪುರಂ ವಿಮಾನ ನಿಲ್ದಾಣದ ನೂತನ ಟರ್ಮಿನಲ್ ಕಟ್ಟಡವನ್ನು ಉದ್ಘಾಟಿಸಿದ ನಂತರ ತೆರೆದ ವಾಹನದಲ್ಲಿ ಸಾಗುವಾಗ ಈ ಬೃಹತ್ ನೃತ್ಯ ಪ್ರದರ್ಶನದ ಮೂಲಕ ಅವರನ್ನು ಸ್ವಾಗತಿಸಲಾಗುವುದು.

ಧಿಂಸಾ ಎಂಬುದು ಮುಖ್ಯವಾಗಿ ಆಂಧ್ರಪ್ರದೇಶ ಮತ್ತು ಒಡಿಶಾ ಗಡಿಭಾಗದಲ್ಲಿರುವ ಅರಕು ಕಣಿವೆ ಹಾಗೂ ವಿಶಾಖಪಟ್ಟಣಂ, ವಿಜಯನಗರ, ಕೊರಾಪುಟ್ ಪ್ರದೇಶಗಳಲ್ಲಿ ನೆಲೆಸಿರುವ ಬುಡಕಟ್ಟು ಜನಾಂಗದವರು ಪ್ರದರ್ಶಿಸುವ ಅತ್ಯಂತ ಜನಪ್ರಿಯ ಮತ್ತು ಸಾಂಪ್ರದಾಯಿಕ ಸಮೂಹ ನೃತ್ಯವಾಗಿದೆ.

## ತುಂಗಾ ಪ್ರವಾಹ: ಶೃಂಗೇರಿ ಜಲಾವೃತ, ಮತ್ತೆ ಗುಡ್ಡ ಕುಸಿತ

www.vikramavahini.com | ಚಿಕ್ಕಮಗಳೂರು

ಕಾಫಿನಾಡು ಹಾಗೂ ಮಲೆನಾಡು ಭಾಗದಲ್ಲಿ ಪುಷ್ಯ ಮಳೆ ಅಬ್ಬರ ಮುಂದುವರಿದಿದೆ. ಧಾರಾಕಾರ ಮಳೆಯಿಂದ ಶೃಂಗೇರಿ ತಾಲೂಕಿನಲ್ಲಿ ಜನಜೀವನ ಅಸ್ತವ್ಯಸ್ತವಾಗಿದ್ದು, ತುಂಗಾ ನದಿ ಅಪಾಯದ ಮಟ್ಟದಲ್ಲಿ ಹರಿಯುತ್ತಿದೆ.

ಮುಳ್ಳಯ್ಯನಗಿರಿ ತಪ್ಪಲಿನಲ್ಲಿ ಗುಡ್ಡ ಕುಸಿತ ಸಂಭವಿಸಿದ್ದು, ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ. ಶೃಂಗೇರಿ ಪಟ್ಟಣದಲ್ಲಿ ಬೆಳಗ್ಗೆಯಿಂದಲೇ ನಿರಂತರ ಮಳೆ ಸುರಿಯುತ್ತಿದೆ. ತುಂಗಾ ನದಿಯ ನೀರಿನ ಮಟ್ಟ ವೇಗವಾಗಿ ಏರಿಕೆಯಾಗಿದ್ದು, ಪಟ್ಟಣದ ಹಲವು ಪ್ರದೇಶಗಳು ಜಲಾವೃತವಾಗಿವೆ. ಕೆಇಬಿ ವೃತ್ತದ ಆಟೋ ನಿಲ್ದಾಣ, ಪ್ಯಾರಲಲ್ ರಸ್ತೆ, ಸೇರಿದಂತೆ ಹಲವು ರಸ್ತೆಗಳ ಮೇಲೆ ನೀರು ಹರಿದಿದ್ದು, ಜನರು ಆತಂಕದಲ್ಲಿ ದಿನ ಕಳೆಯುವಂತಾಗಿದೆ.

ನದಿ ನೀರಿನ ಮಟ್ಟ ಕ್ಷಣಕ್ಷಣಕ್ಕೂ ಏರಿಕೆಯಾಗುತ್ತಿರುವುದರಿಂದ ಪ್ರವಾಹ ಭೀತಿ ಹೆಚ್ಚಿದೆ. ಮಳೆ ಇದೇ ರೀತಿ ಮುಂದುವರಿದರೆ ಇನ್ನಷ್ಟು ಪ್ರದೇಶಗಳಿಗೆ ನೀರು ನುಗ್ಗುವ ಸಾಧ್ಯತೆ ಇದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ಮುಳ್ಳಯ್ಯನಗಿರಿ ತಪ್ಪಲಿನ ದತ್ತಪೀಠ ಮಾರ್ಗದ ಕವಿಕಲ್ ಗಂಡಿ ಬಳಿ ಭೂಮಿಯ ತೇವಾಂಶ ಹೆಚ್ಚಾದ ಪರಿಣಾಮ ಗುಡ್ಡ ಕುಸಿದಿದೆ. ಕಾಂಕ್ರೀಟ್ ತಡೆಗೋಡೆ ನಿರ್ಮಾಣ ನಡೆಯುತ್ತಿದ್ದ ಸ್ಥಳದಲ್ಲೇ ಈ ಘಟನೆ ಸಂಭವಿಸಿದೆ.


ಗುಡ್ಡ ಕುಸಿತದಿಂದ ರಸ್ತೆಯ ಮೇಲೆ ಮಣ್ಣು ಬಿದ್ದಿದ್ದರೂ, ಅಧಿಕಾರಿಗಳು ತಕ್ಷಣವೇ ತೆರವು ಕಾರ್ಯಾಚರಣೆ ನಡೆಸಿ ವಾಹನ ಸಂಚಾರಕ್ಕೆ ಅವಕಾಶ ಮಾಡಿಕೊಟ್ಟಿದ್ದಾರೆ. ಅತ್ತಿಗುಂಡಿ, ಮಹಲ್ ಸೇರಿದಂತೆ ಹಲವು ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಈ ಮಾರ್ಗದಲ್ಲಿ ಮಳೆ ಹೆಚ್ಚಾದರೆ ಮತ್ತಷ್ಟು ಗುಡ್ಡ ಕುಸಿಯುವ ಭೀತಿ ಇದೆ. ಈ ಹಿನ್ನೆಲೆಯಲ್ಲಿ ಸ್ಥಳೀಯರು ಹಾಗೂ ಪ್ರವಾಸಿಗರು ಅಗತ್ಯ ಎಚ್ಚರಿಕೆ ವಹಿಸಿ ಸಂಚರಿಸಬೇಕು ಎಂದು ಜಿಲ್ಲಾಡಳಿತ ಮನವಿ ಮಾಡಿದೆ.

# ನಾಲ್ವರು ಮಹನೀಯರಿಗೆ 'ಅಕ್ಷಯ ರತ್ನ' ಪುರಸ್ಕಾರ

www.vikramavahini.com | ಬೆಂಗಳೂರು

ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಪ್ರೋತ್ಸಾಹ ನೀಡುವ ದಿಸೆಯಲ್ಲಿ ಅಕ್ಷಯ ವಿಪ್ರ ಮಹಾಸಭಾ ವತಿಯಿಂದ ಈ ಬಾರಿ ನಾಲ್ವರು ಮಹನೀಯರಿಗೆ 'ಅಕ್ಷಯ ರತ್ನ' ಪುರಸ್ಕಾರ ನೀಡಿ ಗೌರವಿಸಲಾಗುತ್ತಿದೆ.





2025-26ನೇ ಸಾಲಿನ "ಅಕ್ಷಯ ರತ್ನ" ಬಿರುದು ಪುರಸ್ಕೃತರಲ್ಲಿ ಎ.ವಿ.ಎಂ.ಎಸ್.ನ ಮಾಜಿ ಅಧ್ಯಕ್ಷರು ಹಾಗೂ ವಕೀಲರಾದ ಎನ್.ಜಿ.ವಾಸುದೇವಮೂರ್ತಿ, ಜಯನಗರ ಎವಿಎಂಎಸ್‌ನ ಉಪಾಧ್ಯಕ್ಷರಾದ ಡಿಪಿಟಿಪಿಜಿಆರ್ ಬಿಜಿಎಸ್‌ನ ಡಾ.ಕೆ. ರಘುನಾಥರಾವ್, ಎವಿಎಂಎಸ್‌ನ ಮಾಜಿ ಉಪಾಧ್ಯಕ್ಷರಾದ ದಿ.ಎಸ್.ರಾಮಕೃಷ್ಣ (ಮರಣೋತ್ತರ), ಬೆಂಗಳೂರು ಗ್ರಾಮಾಂತರ ಹೊಸಕೋಟೆಯ ಎವಿಎಂಎಸ್ ಮಾಜಿ ಉಪಾಧ್ಯಕ್ಷರಾದ ಎನ್.ಕೆ.ಪಣೆರಾಜ್ ಇವರು ಪ್ರಮುಖರಾಗಿದ್ದಾರೆ.

ಆಗಸ್ಟ್ 2 ರಂದು ಭಾನುವಾರ ನಡೆಯಲಿರುವ ಪ್ರಶಸ್ತಿ ಪುರಸ್ಕಾರ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮುಳಬಾಗಿಲು ಶ್ರೀಪಾದರಾಜಮಠದ ಪೀಠಾಧಿಪತಿಗಳಾದ 1008 ಶ್ರೀ ಶ್ರೀ ಸುಜಯನಿಧಿ ತೀರ್ಥರು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಲೋಕಸಭಾ ಸದಸ್ಯರಾದ ತೇಜಸ್ವಿ ಸೂರ್ಯ, ಜಯನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಕೆ.ರಾಮಮೂರ್ತಿ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷರಾದ ಎಸ್.ರಘುನಾಥ್ ಅವರು ಪಾಲ್ಗೊಳ್ಳಲಿದ್ದಾರೆ.


ಬೆಳಿಗ್ಗೆ 10 ಗಂಟೆಯಿಂದ ಕಾರ್ಯಕ್ರಮಗಳು ಆರಂಭವಾಗಲಿದ್ದು ಮಧ್ಯಾಹ್ನ 2 ಗಂಟೆಯವರೆಗೆ ಜರುಗಲಿವೆ. ಈ ವೇಳೆ ಪ್ರಾರ್ಥನೆ, ಜ್ಯೋತಿ ಬೆಳಗುವುದು, ಸ್ವಾಗತ ಭಾಷಣ, ಗೌರವ ಅಧ್ಯಕ್ಷರಿಂದ ಭಾಷಣ, ಡೈರೆಕ್ಟರಿ ಪುಸ್ತಕ ಬಿಡುಗಡೆ, ಅಧ್ಯಕ್ಷರ ಭಾಷಣ ಜರುಗಲಿದೆ. ಸಂಜೆ 5-30ರವರೆಗೆ ನಡೆಯುವ ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಕೂಡ ನಡೆಯಲಿವೆ.





ಈ ನಡುವೆ 85 ವರ್ಷ ತುಂಬಿದ ವೃದ್ಧರಿಗೆ, 70 ವರ್ಷದ ದಂಪತಿಗಳಿಗೆ, ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ ಮಾಡಲಾಗುತ್ತದೆ. ಜೊತೆಗೆ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಂಘದ ಸದಸ್ಯರುಗಳಿಗೆ ಸನ್ಮಾನ ಇರಲಿದೆ. ಬಳಿಕ ವಂದನಾರ್ಪಣೆಯ ಮೂಲಕ ಕಾರ್ಯಕ್ರಮ ಸಂಪನ್ನಗೊಳ್ಳಲಿದೆ.

ಈ ಸಮಾರಂಭಕ್ಕೆ ಅಕ್ಷಯ ವಿಪ್ರ ಮಹಾಸಭಾದ ಅಧ್ಯಕ್ಷರಾದ ಎನ್.ಕೆ.ರಾಮಚಂದ್ರರಾವ್, ಗೌರವಾಧ್ಯಕ್ಷರಾದ ಡಾ.ಎನ್.



ಕೀರ್ತಿರಾಜ್, ಉಪಾಧ್ಯಕ್ಷರಾದ ಕೆ.ಆನಂದರಾವ್, ಡಾ.ಕಿರಣ್ ಎಸ್.ಮೂರ್ತಿ, ಡಾ.ಕೆ. ರಘುನಾಥರಾವ್, ಲಕ್ಷೀಶ, ವಿ.ಶ್ರೀಪ್ರಕಾಶ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ರಾಘವೇಂದ್ರರಾವ್, ಕಾರ್ಯದರ್ಶಿಗಳಾದ ಎನ್.ಎಸ್.ಸುಧೀಂದ್ರ ರಾವ್, ಜಂಟಿ ಕಾರ್ಯದರ್ಶಿಗಳಾದ ಮಹೇಶ್ ಕುಮಾರ್ ಆರ್., ಟಿ.ಎನ್.ಶಾಂತ ಕುಮಾರ್., ಎನ್.ಪಿ.ಮಂಜುನಾಥ್, ಎಲ್.ಜಗನ್ನಾಥ್, ಆರ್.ಶ್ರೀನಿವಾಸ್, ಎನ್.ರಾಘವೇಂದ್ರ ರಾವ್, ಆಂತರಿಕ ಲೆಕ್ಕ ಪರಿಶೋಧಕರಾದ ಎನ್. ಜೆ.ಮಣಿಕುಮಾರ್, ಕಾನೂನು ಸಲಹೆಗಾರರಾದ ಎ.ವಿಜಯಕುಮಾರ್ ಭಟ್, ಖಜಾಂಚಿಗಳಾದ ಎನ್.ರಾಘವೇಂದ್ರರಾವ್ ಮತ್ತು ಕಾರ್ಯಕಾರಿ ಸದಸ್ಯರು ಸ್ವಾಗತಿಸಿದ್ದಾರೆ.

ಬೆಂಗಳೂರು ಜಯನಗರದ 4ನೇ ಬ್ಲಾಕ್‌ನ 11ನೇ ಮುಖ್ಯರಸ್ತೆಯ ವಿಜಯ ಕಾಲೇಜು ಆವರಣದ ಪ್ರೊ.ಬಿ.ವಿ. ನಾರಾಯಣ ರಾವ್ ಆಡಿಟೋರಿಯಂನಲ್ಲಿ ನಡೆಯುವ ಸಮಾರಂಭದಲ್ಲಿ ಅಕ್ಷಯ ಪುರಸ್ಕಾರಾಭಿನಂದನ ಕಾರ್ಯಕ್ರಮವೂ ಜರುಗಲಿದೆ.

## ನೀಟ್ ರೋಲ್ ನಂಬರ್ ದಾಖಲಿಸಲು ಆಗಸ್ಟ್ 3 ಕೊನೆ



www.vikramavahini.com | ಬೆಂಗಳೂರು

ವೈದ್ಯಕೀಯ, ದಂತ ವೈದ್ಯಕೀಯ ಮತ್ತು ಆಯುಷ್ ಕೋರ್ಸ್‌ಗಳ ಪ್ರವೇಶಕ್ಕೆ ನೀಟ್ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳು ತಮ್ಮ ನೀಟ್ ರೋಲ್ ನಂಬರ್ ಅನ್ನು ಸಿಇಟಿ ಅರ್ಜಿ ಜತೆ ಜೋಡಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ(ಏಇಂ) ತನ್ನ ವೆಬ್‌ಸೈಟ್‌ನಲ್ಲಿ ಲಿಂಕ್ ಬಿಡುಗಡೆ ಮಾಡಿದೆ.

ನೀಟ್ ರೋಲ್ ನಂಬರ್ ದಾಖಲಿಸಿದ ನಂತರ ಅಭ್ಯರ್ಥಿಗಳು ಹೊಸದಾಗಿ ಅರ್ಜಿ ಮತ್ತು ವೆರಿಫಿಕೇಷನ್ ಸ್ಲಿಪ್ ಡೌನ್‌ಲೋಡ್ ಮಾಡಿಕೊಳ್ಳಬೇಕು. ನಂತರ ಮುದ್ರಿತ ನೀಟ್ ನಂಬರ್ ಅನ್ನು ಕೂಡ ಒಮ್ಮೆ ಪರಿಶೀಲಿಸಿಕೊಳ್ಳಬೇಕು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಅವರು ಸಲಹೆ ನೀಡಿದ್ದಾರೆ.

ನೀಟ್ ರೋಲ್ ನಂಬರ್ ದಾಖಲಿಸಲು ಆಗಸ್ಟ್ 3 ರವರೆಗೆ ಅವಕಾಶ ನೀಡಲಾಗಿದೆ. ಮೊದಲ ದಿನವೇ 25 ಸಾವಿರಕ್ಕೂ ಹೆಚ್ಚು ಮಂದಿ ನೋಂದಣಿ ಸಂಖ್ಯೆಯನ್ನು ದಾಖಲಿಸಿದ್ದಾರೆ ಎಂದು ಹೇಳಿದ್ದಾರೆ.

ರಾಜ್ಯದವರ ಅಂಕಪಟ್ಟಿ ಪ್ರಕಟ

ಪ್ರಸಕ್ತ ಸಾಲಿನ ನೀಟ್ ಪರೀಕ್ಷೆಯಲ್ಲಿ ಅರ್ಹರಾದ ಹಾಗೂ ಎನ್‌ಟಿಎ ಅರ್ಜಿಯಲ್ಲಿ ಕರ್ನಾಟಕ ಎಂದು ನಮೂದಿಸಿದ್ದ ಅಭ್ಯರ್ಥಿಗಳ ಅಂಕಪಟ್ಟಿಯನ್ನು ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ ಎಂದು ಪ್ರಸನ್ನ ತಿಳಿಸಿದ್ದಾರೆ.

ನೀಟ್ ರೋಲ್ ನಂಬರ್ ಅನ್ನು ನಿಗದಿತ ಅವಧಿಯೊಳಗೆ ದಾಖಲಿಸದ ಅಭ್ಯರ್ಥಿಗಳು ಕರ್ನಾಟಕದ ವೈದ್ಯಕೀಯ, ದಂತ ವೈದ್ಯಕೀಯ ಹಾಗೂ ಆಯುಷ್ ಕೋರ್ಸ್‌ಗಳ ಸೀಟು ಹಂಚಿಕೆ ಪ್ರಕ್ರಿಯೆಯಲ್ಲಿ ತಾಂತ್ರಿಕ ಸಮಸ್ಯೆಗಳನ್ನು ಎದುರಿಸುವ ಸಾಧ್ಯತೆ ಇದೆ.

ಅಖಿಲ ಭಾರತ ಮಟ್ಟದಲ್ಲಿ 20ನೇ ಖಚಿಟಇ ಪಡೆದಿರುವ ಅಭ್ಯರ್ಥಿ ರಾಜ್ಯದ ರಾಂಕ್ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿ ಇದ್ದಾನೆ. ಅರ್ಹರಾಗಿರುವ ಒಟ್ಟು 69,170 ಮಂದಿಯ ಅಂಕಪಟ್ಟಿಯನ್ನು ಆರೋಹಣ ಕ್ರಮದಲ್ಲಿ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ ಎಂದು ಅವರು ವಿವರಿಸಿದ್ದಾರೆ.

## 'ಶಿಕ್ಷಿಸುವುದಕ್ಕಿಂತ ಸರಿಯಾದ ದಾರಿಗೆ ತರೋದೇ ನಮ್ಮ ಧರ್ಮ'

www.vikramavahini.com | ನವದೆಹಲಿ

ಜಂತರ್ ಮಂತರ್‌ನಲ್ಲಿ ನಡೆದ ಘಟನೆ ಹಾಗೂ ತಮ್ಮ ಮತ್ತು ತಮ್ಮ ದಿವಂಗತ ತಾಯಿಯ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಪ್ರತಿಭಟನೆ ವೇಳೆ ವ್ಯಕ್ತವಾದ ನಿಂದನಾತ್ಮಕ ಹೇಳಿಕೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಭಾವುಕವಾಗಿ ಪ್ರತಿಕ್ರಿಯಿಸಿದ್ದಾರೆ. ತಮ್ಮ ಅಧಿಕೃತ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ವಿಡಿಯೊ ಸಂದೇಶ ಹಂಚಿಕೊಂಡ ಅವರು, ಇಂತಹ ಭಾಷೆ ಇಡೀ ಸಮಾಜಕ್ಕೆ ಸಾಂಸ್ಕೃತಿಕ ಆಘಾತ ಉಂಟುಮಾಡಿದೆ ಎಂದು ಬೇಸರ ವ್ಯಕ್ತಪಡಿಸಿದರು.



ತಪ್ಪು ಮಾಡಿದ ಯುವಕರನ್ನು ಶಿಕ್ಷಿಸುವುದಕ್ಕಿಂತ ಅವರನ್ನು ಸರಿದಾರಿಗೆ ತರುವುದು ಸಮಾಜದ ಜವಾಬ್ದಾರಿ ಎಂದು ಹೇಳಿದ ಮೋದಿ, "ಅವರನ್ನು ಕ್ಷಮಿಸಲು ನಾನು ಬಯಸುತ್ತೇನೆ. ಕೋರ್ಟ್, ಶಿಕ್ಷೆ ಅಥವಾ ದ್ವೇಷದಿಂದ ಸಮಸ್ಯೆ ಬಗೆಹರಿಯುವುದಿಲ್ಲ. ದಾರಿ ತಪ್ಪಿದವರನ್ನು ತಿದ್ದುವುದು ನಮ್ಮ ಕರ್ತವ್ಯ" ಎಂದರು. ದೇಶದ ಪ್ರಗತಿಗೆ ಯುವಜನತೆ ಕೈಜೋಡಿಸಿ, ತಪ್ಪುಗಳಿಂದ ಪಾಠ ಕಲಿತು ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳುವಂತೆ ಅವರು ಕರೆ ನೀಡಿದರು.

# ಬಸ್ ಟಿಕೆಟ್ ದರ ಏರಿಕೆ ಫಿಕ್ಸ್...!

**ಡೀಸೆಲ್ ಬೆಲೆ ಏರಿಕೆಯಿಂದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ನಾಲ್ಕು ಸಾರಿಗೆ ನಿಗಮಗಳಿಗೆ ತಿಂಗಳಿಗೆ ಸುಮಾರು ರೂ40 ಕೋಟಿ ಹೆಚ್ಚುವರಿ ಹೊರೆ ಉಂಟಾಗಿದ್ದು, ಬಸ್ ಟಿಕೆಟ್ ದರ ಏರಿಕೆಗೆ ಸರ್ಕಾರದ ಅನುಮತಿ ಕೋರಲಾಗಿದೆ. ದರ ಪರಿಷ್ಕರಣೆ ಕುರಿತು ಸಮಿತಿ ರಚನೆಯಾಗಿದ್ದು, ಅದರ ಶಿಫಾರಸಿನ ಬಳಿಕ ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಲಿದೆ.**

www.vikramavahini.com | ಬೆಂಗಳೂರು

ಮಧ್ಯಪ್ರಾಚ್ಯ ಯುದ್ಧ ಎಫೆಕ್ಟ್ ಹಿನ್ನೆಲೆಯಲ್ಲಿ ಈಗಾಗಲೇ ಡಿಸೇಲ್ ಲೀಟರ್ ಮೇಲೆ ಸುಮಾರು 8 ರೂಪಾಯಿ ಏರಿಕೆ ಆಗಿದೆ.ಇದರಿಂದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ನಾಲ್ಕು ನಿಗಮಕ್ಕೆ ಕೋಟ್ಯಂತರ ರೂಪಾಯಿ ಹೆಚ್ಚಿನ ಹೊರೆ ಬೀಳುತ್ತಿದೆ.

ಹೀಗಾಗಿ ಸಂಕಷ್ಟದಿಂದ ಪಾರಾಗಲು ಬಸ್ ಟಿಕೆಟ್ ದರ ಏರಿಕೆಗೆ ಗ್ರೀನ್ ಸಿಗ್ನಲ್ ನೀಡುವಂತೆ ಸಿಎಂ ಡಿಕೆ ಶಿವಕುಮಾರ್ ಗೆ ಕೆಎಸ್‌ಆರ್‌ಟಿಸಿ, ಬಿಎಂಟಿಸಿ,ಒಟ್ಟು ನಾಲ್ಕು ನಿಗಮಗಳು ಮನವಿ ಮಾಡಿವೆ. ಕೆಎಸ್‌ಆರ್‌ಟಿಸಿ- 33% ರಷ್ಟು, ಬಿಎಂಟಿಸಿ- 44% ರಷ್ಟು ಟಿಕೆಟ್ ದರ ಏರಿಕೆಗೆ ಮನವಿ ಮಾಡಿವೆ ಎನ್ನಲಾಗಿದೆ.

ಡಿಸೇಲ್ ದರ ಏರಿಕೆಯಿಂದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ,ನಿಗಮಕ್ಕೆ ಒಂದು ತಿಂಗಳಿಗೆ 40 ಕೋಟಿ ರೂಪಾಯಿ ನಷ್ಟವಾಗುತ್ತಿದೆ. ಇದೇ ಆವರೇಜ್ ಮುಂದುವರಿದ್ರೆ ವಾರ್ಷಿಕವಾಗಿ 480 ಕೋಟಿ ರೂ. ನಷ್ಟ ಆಗುವ ಸಾಧ್ಯತೆ ಇದೆ. ಇದರಿಂದ ಕೆಎಸ್‌ಆರ್‌ಟಿಸಿ,



ಬಿಎಂಟಿಸಿ ಸೇರಿದಂತೆ ನಾಲ್ಕು ನಿಗಮದ ಬಸ್ ಟಿಕೆಟ್ ದರ ಏರಿಕೆ ಮಾಡಿಲ್ಲ ಅಂದರೆ, ನಿಗಮಗಳನ್ನು ನಡೆಸುವುದು ಕಷ್ಟ ಎಂದು ಸಿಎಂಗೆ, ನಾಲ್ಕು ನಿಗಮದ ಅಧಿಕಾರಿಗಳು ಮನವಿ ಮಾಡಿದ್ದಾರೆ.

ರಾಜ್ಯ ಸರ್ಕಾರ ಟಿಕೆಟ್ ದರ ಏರಿಕೆ ಮಾಡಲು ದರ ಏರಿಕೆ ಸಮಿತಿ ರಚನೆ ಮಾಡಲಾಗಿದೆ. ನಿವೃತ್ತ ಐಎಎಸ್ ಅಧಿಕಾರಿ ಅತುಲ್ ಕುಮಾರ್ ತಿವಾರಿ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಲಾಗಿದೆ. ಇನ್ನೂ ಈಗಾಗಲೇ ಬಸ್ ದರ ಏರಿಕೆಗೆ ಸಾರಿಗೆ ನಿಗಮಗಳು ಪಟ್ಟು ಹಿಡಿದಿದ್ದು, ಎಲ್ಲಾ ನಿಗಮಗಳ ಆರ್ಥಿಕ ಪರಿಸ್ಥಿತಿ ನೋಡಿಕೊಂಡು ದರ ಏರಿಕೆ ಬಗ್ಗೆ ಶಿಫಾರಸ್ಸು ಮಾಡಲು ಈ ಸಮಿತಿಗೆ ಸೂಚನೆ ನೀಡಲಾಗಿದೆ.

ಸಮಿತಿಯ ಶಿಫಾರಸಿನ ಆಧಾರದ ಮೇಲೆ ಸರ್ಕಾರ ಅಂತಿಮ ತೀರ್ಮಾನ ಕೈಗೊಳ್ಳಲಿದ್ದು, ದರ ಏರಿಕೆ ಜಾರಿಗೆ ಬಂದರೆ ನಗರ ಹಾಗೂ ಗ್ರಾಮೀಣ ಸಾರಿಗೆ ಸೇವೆ ಬಳಸುವ ಲಕ್ಷಾಂತರ ಪ್ರಯಾಣಿಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆ ಇದೆ.

ಈ ಸಮಿತಿಯಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಅತುಲ್ ಕುಮಾರ್ ತಿವಾರಿ, ಸಮಿತಿಯ ಅಧ್ಯಕ್ಷ ದ್ವಾರಕನಾಥ್ ಬಾಬು, ಸರ್ಕಾರದ ಕಾರ್ಯದರ್ಶಿ ( ನಿವೃತ್ತ) ಸಂಸದೀಯ ವ್ಯವಹಾರಗಳ ಹಾಗೂ ಶಾಸನ ರಚನಾ ಇಲಾಖೆ (ಸಮಿತಿ ಸದಸ್ಯ)ಡಾ. ಅಬ್ದುಲ್ ಪಿಂಜರಿ, (ಸಮಿತಿ ಸದಸ್ಯ) ಇರಲಿದ್ದಾರೆ. ಇದರಿಂದ ಬಸ್ ಟಿಕೆಟ್ ದರ ಏರಿಕೆ ಮಾಡುವುದು ಖಚಿತ ಎನ್ನಲಾಗುತ್ತಿದ್ದು, ಎಷ್ಟು ಏನು ಎನ್ನುವುದು ಮಾತ್ರ ಸರ್ಕಾರ ಸುತ್ತೋಲೆ ಹೊರಡಿಸಿದ ಬಳಿಕವೇ ತಿಳಿಯಲಿದೆ.

# ಭಾರತವು ಬಯಸುವುದು ಏನನ್ನು...?

**ಜಾಗತಿಕ ರಾಜಕೀಯದಲ್ಲಿ ಭಾವನೆಗಳಿಗಿಂತ ರಾಷ್ಟ್ರೀಯ ಹಿತಾಸಕ್ತಿಯೇ ಮುಖ್ಯ ಎಂಬ ವಾದವನ್ನು ಮುಂದಿಡುವ ಈ ಲೇಖನ, ಇರಾನ್ ಕುರಿತು ಭಾರತದ ನಿಲುವು, ಪಶ್ಚಿಮ ಏಷ್ಯಾದ ಬದಲಾಗುತ್ತಿರುವ ರಾಜತಾಂತ್ರಿಕ ಸಮೀಕರಣಗಳು ಹಾಗೂ ದೇಶದ ವಿದೇಶಾಂಗ ನೀತಿಯನ್ನು ವಿಶ್ಲೇಷಿಸುತ್ತದೆ. ಜೊತೆಗೆ, ಭಾರತದ ಭದ್ರತೆ, ವ್ಯಾಪಾರ ಮತ್ತು ರಾಷ್ಟ್ರೀಯ ಹಿತವೇ ದೇಶದ ಪ್ರಮುಖ ಆದ್ಯತೆಯಾಗಬೇಕು ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತದೆ.**

ಜಗತ್ತಿನಲ್ಲಿ 57 ಮುಸ್ಲಿಂ ಬಹುಸಂಖ್ಯಾತ ಜನಸಂಖ್ಯೆಯುಳ್ಳ ದೇಶಗಳಿವೆ. ಅವುಗಳಲ್ಲಿ ಒಂದೇ ಒಂದು ದೇಶವು ಕೂಡ ಇರಾನ್‌ಗೆ ಬೆಂಬಲ ನೀಡಲಿಲ್ಲ, ಏಕೆ? ಕೆಲವೇ ದಿನಗಳ ಹಿಂದೆ ಇರಾನ್ ಯಾವ ದೇಶಗಳ ಮೇಲೆ ಕ್ಷಿಪಣಿಗಳನ್ನು ಹಾರಿಸಿತು ಎಂಬುದನ್ನು ಒಮ್ಮೆ ಗಮನಹರಿಸಿ. ಸೌದಿ ಅರೇಬಿಯಾ, ಯುಎಇ, ಬಹ್ರೇನ್, ಕತಾರ್, ಓಮನ್, ಟರ್ಕಿಯ ಮೇಲೆ. ಇವೆಲ್ಲವೂ ಮುಸ್ಲಿಂ ರಾಷ್ಟ್ರಗಳು. ಇರಾನ್ ಬಯಸಿದರೆ, ಈ ದೇಶಗಳಲ್ಲಿರುವ ಅಮೆರಿಕದ ಮಿಲಿಟರಿ ನೆಲೆಗಳನ್ನು ಮಾತ್ರ ಗುರಿಯಾಗಿಸಿಕೊಳ್ಳಬಹುದಿತ್ತು. ಆದರೆ ಹಾಗೆ ಮಾಡಲಿಲ್ಲ. ಅದು ಸೌದಿ ಅರೇಬಿಯಾದ ಅರಾಮ್ಕೊ ತೈಲ ಸಂಸ್ಕರಣಾಗಾರ, ದುಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಇತರ ನಾಗರಿಕ ಕಟ್ಟಡಗಳ ಮೇಲೆ ದಾಳಿ ಮಾಡಿತು.

ಹೆಜ್ಬುಲ್ಲಾ, ಹಮಾಸ್ ಮತ್ತು ಹೌತಿ ಉಗ್ರಗಾಮಿಗಳಿಗೆ ಖಮೇನಿ ನಿರಂತರ ಬೆಂಬಲ ನೀಡಿದರು. ಆದರೆ ನಮ್ಮ ದೇಶದಲ್ಲಿ ಕೆಲವು ಮತಾಂತರಗೊಂಡವರು ಇರಾನನ್ನು ಬೆಂಬಲಿಸುವ ಮೂಲಕ ಇಸ್ಲಾಂ ಅನ್ನು ಬೆಂಬಲಿಸುತ್ತಿದ್ದೇವೆ ಎಂದು ನಂಬಿದರು. ಅದಕ್ಕಾಗಿ ಅವರು ರ್‍ಯಾಲಿಗಳನ್ನು ನಡೆಸಿದರು.

ಭಾರತದ ನೆಲದಲ್ಲಿ ಅನ್ನ, ಆಶ್ರಯ, ಶಿಕ್ಷಣ, ಉದ್ಯೋಗ, ಬದುಕು ಸಾಗಿಸುವ ಯಾರಿಗೇ ಆದರೂ ಭಾರತ ಮುಖ್ಯವಾಗಬೇಕು. ಈ ದೇಶದ ಸಂಕಷ್ಟಗಳಿಗೆ ಮರುಗಬೇಕು. ವಿಶ್ವಾದ್ಯಂತ ಇರುವ ಭಾರತೀಯರಿಗಾಗಿ ಮರುಗಬೇಕು. ರಾಷ್ಟ್ರದ್ರೋಹವು ರಾಷ್ಟ್ರನಿಷ್ಠೆಯಲ್ಲ!

ಇರಾನ್ ಒಂದು ಕಾಲದಲ್ಲಿ "ಪರ್ಷಿಯಾ", ಜೊರಾಸ್ಟ್ರಿಯನ್ ಬಹುಸಂಖ್ಯಾತ ರಾಷ್ಟ್ರವಾಗಿತ್ತು ಎಂಬುದನ್ನು ನೆನಪಿನಲ್ಲಿಡಬೇಕು. ಅದರ ಜನರು ಖಮೇನಿ ವಿರುದ್ಧ ಬೀದಿಗಿಳಿದು ಪ್ರತಿಭಟಿಸುತ್ತಿದ್ದರು. ಮತ್ತು ಖಮೇನಿಯವರ ಮರಣದ ನಂತರ, ಇರಾನ್‌ನ ಮಾಜಿ ಕ್ರೌನ್ ಪ್ರಿನ್ಸ್ ರೆಜಾ ಪಹ್ಲವಿ, "ದೆವ್ವ ಸತ್ತಿದೆ" ಎಂದು ಕೂಡ ಹೇಳಿದ್ದರು.

ಇರಾನಿನ ಸರ್ವೋಚ್ಚ ನಾಯಕನ "ಕತೆ" ಮುಗಿದ ಅನಂತರ "ವಿಶ್ವಗುರು" ಏಕೆ ಸಂತಾಪ ಸೂಚಿಸುವ ಟ್ವೀಟ್ ಅನ್ನು ಪೋಸ್ಟ್ ಮಾಡಲಿಲ್ಲ ಎಂದು ಭಾರತವೂ ಸೇರಿ ಜಗತ್ತು ಕೇಳಿತ್ತು. ಜನರು ಮೋದಿಯ ಮೌನದಲ್ಲಿ ಅರ್ಥವನ್ನು ಹುಡುಕಿದರು. ಆದರೆ ಸತ್ಯವೇನೆಂದರೆ ದೆಹಲಿಯ ಅಧಿಕಾರದ ಕಾರಿಡಾರ್‌ಗಳಲ್ಲಿ, ಶೋಕಾಚರಣೆಯ ಒಪ್ಪಂದವು ಯಾವತ್ತೋ ಕೊನೆಗೊಂಡಿತ್ತು.

ಭಾವನಾತ್ಮಕ ಸಂಬಂಧಗಳನ್ನು ಕಾಪಾಡಿಕೊಳ್ಳುವ ಯುಗ ಎಂದೋ ಮುಗಿದುಹೋಗಿದೆ; ಈಗ ಉಳಿದಿರುವುದು ಕೇವಲ ಆಸಕ್ತಿಗಳು ಮಾತ್ರ. ಟೆಹ್ರಾನಿನ ಬೀದಿಗಳಲ್ಲಿ ಯಾರ ಅಂತ್ಯಕ್ರಿಯೆಯ ಮೆರವಣಿಗೆ ಸಾಗುತ್ತಿದೆ ಎಂಬುದು ಮೋದಿ ಮತ್ತು ಭಾರತದ ಹಿಂದೂಗಳ ಮೇಲೆ ಕಿಂಚಿತ್ತೂ ಪರಿಣಾಮ ಬೀರುವುದಿಲ್ಲ.

ಅದು ಮುಖ್ಯವೂ ಅಲ್ಲ. ಆದರೆ, ಅಲ್ಲಿಯ ಅಧಿಕಾರದ ಸ್ಥಾನವನ್ನು ಯಾರು ತೆಗೆದುಕೊಳ್ಳುತ್ತಾರೆ ಎಂಬುದಷ್ಟೆ ಭಾರತಕ್ಕೆ ಮುಖ್ಯ. ವಿದೇಶಾಂಗ ನೀತಿಯಲ್ಲಿ ಭಾರತದ ದೃಷ್ಟಿಕೋನ ಸುಸ್ಪಷ್ಟವಾಗಿದೆ. ದುಃಖಿಸಬೇಕೇ ಅಥವಾ ಉಗುಳಬೇಕೇ ಎಂಬುದು ಮುಂದಿನ ಸರ್ಕಾರದ ನಡವಳಿಕೆ ಮತ್ತು ಭಾರತದ ಹಿತಾಸಕ್ತಿಗಳನ್ನು ಅವಲಂಬಿಸಿರುತ್ತದೆ.

ಭಾರತಕ್ಕೆ ಇರಾನ್ ಜೊತೆ "ಪ್ರಣಯ" ಬೇಡ; ವ್ಯಾಪಾರ ಬೇಕು. ಚೀನಾದ ಕಂಪನಿಗಳು ಇಲ್ಲಿಯವರೆಗೆ ನುಂಗುತ್ತಿದ್ದ ಆ ಪುನರ್ನಿರ್ಮಾಣ ಒಪ್ಪಂದಗಳ ಮೇಲೆ ಈಗ ಭಾರತದ ಕಣ್ಣುಗಳಿವೆ. ಅಲ್ಲಿ ತನ್ನ ಬಲವನ್ನು ವಿಸ್ತರಿಸಲು, ಡ್ರ್ಯಾಗನನ್ನು ಹಿಮ್ಮೆಟ್ಟಿಸಲು ಮತ್ತು ಚಾಬಹಾರ್ ಮೂಲಕ ಬಲೂಚಿಸ್ತಾನದ ಪ್ರತಿಯೊಂದು ದಡದತ್ತ ಪ್ರಭಾವವನ್ನು ವಿಸ್ತರಿಸಲು ಭಾರತ ಬಯಸುತ್ತದೆ. ಭಾರತದ ಲೆಕ್ಕಾಚಾರ ನೇರ ಮತ್ತು ಸರಳವಾಗಿದೆ.

ಯುಎಇಗೆ ಸಂತಾಪ ಮತ್ತು ಇರಾನ್ ಬಗ್ಗೆ ಮೌನದ ಹಿಂದಿನ ನಿಜವಾದ ಸತ್ಯವಿಷ್ಟೆ: ಮೋದಿ ಯುಎಇ ರಾಜನೊಂದಿಗೆ ಮಾತನಾಡಿದರು. ಟ್ವೀಟ್ ಮಾಡಿ ಜೀವಹಾನಿಯ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿದರು. ಭಾರತದ ಸೋಕಾಲ್ಡ್ ಉದಾರವಾದಿಗಳು ಈ ದ್ವಿಮುಖ ನೀತಿ ಏಕೆ ಎಂದು ಕೇಳಿದರು.

ಭಾರತದ ಲಕ್ಷಾಂತರ ಹಿಂದೂಗಳು ಅಲ್ಲಿ ವಾಸಿಸುತ್ತಿದ್ದಾರೆ. ಭಾರತ ಕಷ್ಟಪಟ್ಟು ಸಂಪಾದಿಸಿದ ಹಣ ಮತ್ತು ಸಂಸ್ಕೃತಿ ಅಲ್ಲಿ ಬೇರೂರಿ ನಿಂತಿದೆ. ನೇಪಾಳಿ ಹಿಂದೂ ಒಬ್ಬರ ಪ್ರಾಣ ಹೋದ ವರದಿಯಿದೆ. ಭಾರತೀಯರ ವಿಷಯಕ್ಕೆ ಬಂದಾಗ, ಮೋದಿ ನೋವು ಅನುಭವಿಸುತ್ತಾರೆ. ಆಫ್ ಕೋರ್ಸ್ ಅದು ಭಾರತೀಯರಿಗೂ ನೋವು ತರುತ್ತದೆ.

ಇರಾನಿನ ಧಾರ್ಮಿಕ ತೀವ್ರಗಾಮಿಗಳಿಗಾಗಿ ಕಣ್ಣೀರು ಹಾಕಬೇಕಿಲ್ಲ, ಆದರೆ ಕೊಲ್ಲಿಯಲ್ಲಿ ವಾಸಿಸುವ ಭಾರತೀಯರಿಗಾಗಿ, ಅವರ ಸುರಕ್ಷತೆಗಾಗಿ ಭಾರತದ ಸಹಾನುಭೂತಿ ಮತ್ತು ಶಕ್ತಿ ಎರಡೂ ಯಾವತ್ತೂ ಇದ್ದೇ ಇದೆ.

ಭಾರತ ಈಗ "ಉಮ್ಮಾ" ಎಂಬ ಸಹೋದರತ್ವದಲ್ಲಿ ಸಿಲುಕಿಕೊಂಡಿಲ್ಲ. ತನ್ನ ಸ್ವಂತ ಹಿತಾಸಕ್ತಿಗಳು, ಗಡಿಗಳು ಮತ್ತು ನಮ್ಮ ತ್ರಿವರ್ಣ ಧ್ವಜ ಮಾತ್ರ ಭಾರತಕ್ಕೆ ಕಾಣುತ್ತವೆ. ಉಳಿದ ಪ್ರಪಂಚವು ಬಯಸಿದರೆ ಉರಿದು ಹೋಗಲಿ. ಆದರೆ, ತನ್ನ ಸ್ವಂತ ಮನೆಯನ್ನು ಬೆಳಗಿಸಬೇಕೆಂದು ಭಾರತ ಬಯಸುತ್ತದೆ.

ರಾಷ್ಟ್ರಗಳು ಮದವೇರಿ ಕರುಣೆಯನ್ನು ಕಳಕೊಂಡಾಗ ಜೀವಸಂಕುಲ ಉಸಿರಿಗಾಗಿ ತತ್ತರಿಸಿದ್ದನ್ನು ಚರಿತ್ರೆಯಲ್ಲಿ ಓದಿದ್ದೇವೆ. ಈಗ ಕಾಣುತ್ತಿದ್ದೇವೆ, ಅಷ್ಟೆ!



ಟಿ. ದೇವಿದಾಸ್

Vikrama Vahini English Daily, #204, Forest Layout, Jnanabharathi, Bangalore-95
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 128,